ಮೆಗಾ ಮಾರ್ಕೆಟ್ ಅಂಗಡಿಗಳ ಕಾಮಗಾರಿಗೆ ₹5 ಕೋಟಿ ಅನುದಾನ

ಸಿಂದಗಿ: ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ಮೆಗಾ ಮಾರ್ಕೆಟ್‌ನಲ್ಲಿನ ಅಂಗಡಿಗಳ ಕಾಮಗಾರಿ ಪ್ರಾರಂಭಿಸಲು 2ನೇ ಹಂತದಲ್ಲಿ ₹5 ಕೋಟಿಗಳ ಎಸ್.ಎಫ್.ಸಿ ವಿಶೇಷ ಅನುದಾನವನ್ನು ಮಂಜೂರು ಮಾಡಲು ಆರ್ಥಿಕ ಇಲಾಖೆ ಸಹಮತಿ



ನೀಡಿದೆ ಎಂದು ಶಾಸಕ ಅಶೋಕ ಮನಗೂಳಿ ತಿಳಿಸಿದ್ದಾರೆ. ಈ ಹಿಂದೆ ಮೊದಲ ಹಂತದಲ್ಲಿ ರಾಜ್ಯ ಸರ್ಕಾರ ₹5 ಕೋಟಿ ಅನುದಾನವನ್ನು ಮಂಜೂರು ಮಾಡಿ ಕಾಮಗಾರಿ ಪ್ರಾರಂಭಿಸಲು ಅನುಮತಿ ನೀಡಿದೆ. ಕಾಮಗಾರಿ ಕಾರ್ಯ ಬರದಿಂದ ಸಾಗಿದ್ದು, ಉತ್ತಮ ಮಾರುಕಟ್ಟೆಯಾಗಿ ಪಟ್ಟಣದಲ್ಲಿ ಮೆಗಾ ಮಾರ್ಕೆಟ್ ನಿರ್ಮಾಣವಾಗಲಿದೆ. ಅನುದಾನ ಬಿಡುಗಡೆಗೊಳಿಸಿದ ರಾಜ್ಯ ಸರ್ಕಾರಕ್ಕೆ ಕ್ಷೇತ್ರದ ಜನತೆಯ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ತಿಳಿಸಿದ್ದಾರೆ.

ಸುದ್ದಿ ಸಿಂಚನ

ಉಪ್ಪಿನ ಡಿಗ್ರಿ ಕಾಲೇಜಿನಲ್ಲಿ ವಿಶ್ವ ರೆಡ್‌ಕ್ರಾಸ್ ದಿನಾಚರಣೆ



ವಿಜಯಪುರ: ನಗರದ ಸಿದ್ದೇಶ್ವರ ಸಂಸ್ಥೆಯ ಎಸ್. ಸಿ. ಉಪ್ಪಿನ ಡಿಗ್ರಿ ಕಾಲೇಜಿನಲ್ಲಿ ವಿಶ್ವ ರೆಡ್‌ಕ್ರಾಸ್ ದಿನ ಆಚರಿಸಲಾಯಿತು. ರೆಡ್‌ಕ್ರಾಸ್ ಕೋಶದ ಮುಖ್ಯಸ್ಥ ಪರಶುರಾಮ ತರಲಗಟ್ಟಿ, ತಾಲೂಕು ಎನ್‌ಎಸ್‌ಎಸ್ ಕಾರ್ಯಕ್ರಮ ಅಧಿಕಾರಿ ರಾಜು ಕಪಾಲಿ, ಸಂಸ್ಥೆಯ ಸಿಇಒ ಡಾ.ಎಚ್.ವೆಂಕಟೇಶ, ಪ್ರಾಂಶುಪಾಲೆ ಡಾ. ಸುನಿತಾ ಕಟ್ಟಿಮನಿ, ಐಕ್ಯೂಎಸಿ ಮುಖ್ಯಸ್ಥ ಅಭಿಷೇಕ ಚಿಂಚಲಿ, ಜಗದೀಶ ಸಾತಿಹಾಳ, ರಮೇಶ ಮೇತ್ರಿ ಇದ್ದರು.

ನಾಳೆ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಆಚರಣೆಯನ್ನು ಮೇ 10 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಉದ್ಘಾಟಿಸುವರು. ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಸಚಿವ ಶಿವಾನಂದ ಪಾಟೀಲ ಸೇರಿದಂತೆ ಅವಳಿ ಜಿಲ್ಲೆಗಳ ಜನಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿ, ಸಿಬ್ಬಂದಿ ಸಾರ್ವಜನಿಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಮತ್ತು ಗಣ್ಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆ ತಿಳಿಸಿದೆ.

11 ರಂದು ಬೃಹತ್ ಉದ್ಯೋಗ ಮೇಳ

ಸಿಂದಗಿ: ನಗರದ ಸಾರಂಗಮಠದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಚೇರಮನ್ ಡಾ.ಪ್ರಭುದೇವ ಶಿವಾಚಾರ್ಯರ ಸದಾಶಯದಂತೆ ಜಿ.ಪಿ.ಪೋರವಾಲಾ ಕಲಾ ವಾಣಿಜ್ಯ ಹಾಗೂ ವಿ.ವಿ.ಶಾಲಿ ಮಟ್ ವಿಜ್ಞಾನ ಮಹಾವಿದ್ಯಾಲಯದಲ್ಲಿ ನಿರ್ಮಾಣ ಸಂಸ್ಥೆಯ ಸಂಯೋಗದಲ್ಲಿ ಮೇ 11ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ. ಟಾಟಾ, ಹೋಂಡಾ, ಟಿವಿಎಸ್, ಆದಿತ್ಯ ಹೆಲ್ತ್‌ಕೇರ್, ಐಫೋನ್, ಷಾ ಹುಂಡೈ, ಆರ್‌ಬಿಎಲ್ ಬ್ಯಾಂಕ್, ಐಸಿಐಸಿಐ ಬ್ಯಾಂಕ್ ಒಳಗೊಂಡು ಅನೇಕ ಬೆಂಗಳೂರಿನ ಪ್ರತಿಷ್ಠಿತ ಹಾಗೂ ಇನ್ನುಳಿದ 25ಕ್ಕಿಂತ ಅಧಿಕ ಕಂಪನಿಗಳು ಭಾಗವಹಿಸಲಿವೆ. ಬ್ಯಾಂಕಿಂಗ್, ಉತ್ಪಾದನೆ ಮತ್ತು ಸೇವಾ ಕ್ಷೇತ್ರದಲ್ಲಿ ಒಟ್ಟು 5 ಸಾವಿರಕ್ಕಿಂತ ಅಧಿಕ ಉದ್ಯೋಗ ಅವಕಾಶಗಳಿವೆ. ಕೆಲವು ಕಂಪನಿಗಳು ಸ್ಥಳದಲ್ಲಿಯೇ ಉದ್ಯೋಗ ನೇಮಕಾತಿ ಆದೇಶ ಪತ್ರವು ನೀಡಲಿವೆ. ಎಸ್ಸೆಸ್ಸೆಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ ಪದವಿ, ಮಾತುಕೊಟ್ಟರ ಪದವಿ ವಿದ್ಯಾರ್ಥಿ ಹೊಂದಿದ ವಿದ್ಯಾರ್ಥಿಗಳು ಭಾಗವಹಿಸಬಹುದು.ದಾಖಲಾತಿಗಳು, ಆಧಾರ್‌ಕಾರ್ಡ್ ಇತ್ತೀಚಿನ ಭಾವಚಿತ್ರ, ವೈಯಕ್ತಿಕ ಪರಿಚಯದೊಂದಿಗೆ ಪ್ರಚಾರದ ಬಿತ್ತಿ ಪತ್ರದಲ್ಲಿರುವ ಕ್ಯೂಆರ್‌ಕೋಡ್‌ಗೆ ಸ್ಕ್ಯಾನ್ ಮಾಡಿ ನೋಂದಾವಣೆ ಮಾಡಬಹುದಾಗಿದೆ. ಮಾಹಿತಿಗಾಗಿ ಡಿ.ಎಂ.ಸರಶೆಟ್ಟಿ ಮೊ.9845610183, ಪ್ರಕಾಶ್ ತೇಜು ಮೊ.9844994954, ಬಿ.ಆರ್.ಮಹಾಜನಶೆಟ್ಟಿ ಮೊ.9901379309 ಸಂಪರ್ಕಿಸಲು ಕೋರಲಾಗಿದೆ.

ಜಲಾಶಯ ಮಟ್ಟ

ಆಲಮಟ್ಟಿ

- ಗರಿಷ್ಠ ಮಟ್ಟ..................519.60ಮೀ.
- ಇಂದಿನ ಮಟ್ಟ................509.47ಮೀ.
- ಒಳಹರಿವು......................ಇಲ್ಲ
- ಹೊರಹರಿವು..................1,076 ಕ್ಯು

ವೇತನ ಬಿಡುಗಡೆಗೆ ಆಗ್ರಹಿಸಿ ಮನವಿ



ಅಖಂಡ ವಿಜಯಪುರ ಗ್ರಾಮೀಣ ಶೈಕ್ಷಣಿಕ ತಾಲೂಕಿನಲ್ಲಿ ಎಸ್‌ಎಸ್‌ಎ ಯೋಜನೆಯಡಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಮಾರ್ಚ್ ಹಾಗೂ ಏಪ್ರಿಲ್ ತಿಂಗಳ ವೇತನ ಆಗದೇ ಇರುವುದರಿಂದ ಸಂಕಷ್ಟ ಅನುಭವಿಸುತ್ತಿದ್ದು, ತಿಕೋಟಾ ತಾಲೂಕು ನೌಕರರ ಸಂಘದಿಂದ ವೇತನ ಬಿಡುಗಡೆಗೆ ಆಗ್ರಹಿಸಿ ಬಿಇಒ ಬಸವರಾಜ ತಳವಾರ ಅವರಿಗೆ ಮನವಿ ಸಲ್ಲಿಸಲಾಯಿತು.

• **ಕನ್ನಡಪ್ರಭ ವಾರ್ತೆ** ವಿಜಯಪುರ

ಅಖಂಡ ವಿಜಯಪುರ ಗ್ರಾಮೀಣ ಶೈಕ್ಷಣಿಕ ತಾಲೂಕಿನಲ್ಲಿ ಎಸ್‌ಎಸ್‌ಎ ಯೋಜನೆಯಡಿ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಮಾರ್ಚ್ ಹಾಗೂ ಏಪ್ರಿಲ್ ತಿಂಗಳ ವೇತನ ಆಗದೇ ಇರುವುದರಿಂದ ಸಂಕಷ್ಟ ಅನುಭವಿಸುತ್ತಿದ್ದು, ತಿಕೋಟಾ ತಾಲೂಕು ನೌಕರರ ಸಂಘದಿಂದ ವೇತನ ಬಿಡುಗಡೆಗೆ ಆಗ್ರಹಿಸಿ ಬಿಇಒ ಬಸವರಾಜ ತಳವಾರ ಅವರಿಗೆ ಮನವಿ ಸಲ್ಲಿಸಲಾಯಿತು.

ತಾಲೂಕು ಅಧ್ಯಕ್ಷ ಚನ್ನಯ್ಯ ಮಠಪತಿ ಮಾತನಾಡಿ, ಎರಡು ತಿಂಗಳಿನಿಂದ ವೇತನ ಇಲ್ಲದೇ ಶಿಕ್ಷಕರು ಪರದಾಡುವಂತಾಗಿದೆ. ಮಕ್ಕಳ ಶಾಲಾ ಶುಲ್ಕ, ಮನೆ ಬಾಡಿಗೆ, ಸಾಲದ ಕಂತುಗಳು, ಸಂಸಾರಿಕ ಖರ್ಚು ನಿಭಾಯಿಸಲಿಕ್ಕೆ ಆಗದೇ ಸಂಕಷ್ಟ ಎದುರಿಸುತ್ತಿದ್ದಾರೆ. ಯಾವುದೇ ತಾಂತ್ರಿಕ ಸಮಸ್ಯೆ ಅಥವಾ ಬಜೆಟ್ ಸಮಸ್ಯೇ ಏನೇ ಇದ್ದರು ಈ ವಾರದೊಳಗೆ ವೇತನ ಪಾವತಿ ಮಾಡಬೇಕು. ಇಲ್ಲದಿದ್ದರೆ ಕಛೇರಿ ಮುಂದೆ ನೌಕರರ ಸಂಘದ ವತಿಯಿಂದ ವೇತನಕ್ಕಾಗಿ ಪ್ರತಿಭಟನೆಗೆ ಧರಣಿ ಕೂಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾ ನೌಕರರ ಸಂಘದ ಕ್ರೀಡಾ ಕಾರ್ಯದರ್ಶಿ ನೀಜು ಮೇಲಿನಕೇರಿ ಮಾತನಾಡಿ, ಎಸ್‌ಎಸ್‌ಎ ಶಿಕ್ಷಕರು ರಜೆಯಲ್ಲಿ ಕುಟುಂಬ ಸದಸ್ಯರೊಂದಿಗೆ ನೆಮ್ಮದಿಯಿಂದ ಇರಲು ಆಗುತ್ತಿಲ್ಲ. ಏನೇ ಸಮಸ್ಯೆ ಇದ್ದರೂ ಬೇಗನೆ ಇತ್ಯರ್ಥ ಮಾಡಿ ವೇತನ ಮಾಡಬೇಕು ಎಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿಕಟಪೂರ್ವ ಪ್ರಧಾನಕಾರ್ಯದರ್ಶಿ ಜಗದೀಶ ಬೋಳಸೂರ, ಎಂ.ಆರ್.ಮರ್ತೂರ, ಇಮಾಮ್ ಸಾದಿಕ್ ನಿಂಬಾಳಕರ ಇದ್ದರು.

ಮನರೇಗಾ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತನ್ನಿ

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯ ಕುರಿತು ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರಕಾಶ ವಡ್ಡರ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಗ್ರಾಮೀಣ ಬಡಜನರಿಗೆ ಉದ್ಯೋಗ ಭದ್ರತೆ ಒದಗಿಸುವ ಮಹಾತ್ಮಾ ಗಾಂಧಿ ನರೇಗಾ ಮಹತ್ವದ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಎಂದು ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಪ್ರಕಾಶ ವಡ್ಡರ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಜಿಲ್ಲೆಯ ಎಲ್ಲ ತಾಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕನಿರ್ದೇಶಕರು (ಗ್ರಾ.ಉ) ತಾಂತ್ರಿಕ ಸಂಯೋಜಕರು, ತಾಲೂಕು ಎಂ.ಐ.ಎಸ್ ಸಂಯೋಜಕರು, ಐ.ಇ.ಸಿ ಸಂಯೋಜಕರು, ಆಡಳಿತ ಸಹಾಯಕರು ಹಾಗೂ ತಾಂತ್ರಿಕ ಸಹಾಯಕರೊಂದಿಗೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ವಿವಿಧ ವಿಷಯಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೆಲಸದ ಬೇಡಿಕೆ ಸಲ್ಲಿಸಿದ ಪ್ರತಿಯೊಬ್ಬ ಅರ್ಹ ಕುಟುಂಬಗಳಿಗೆ ಕಾಲಮಿತಿಯೊಳಗೆ ಉದ್ಯೋಗ ಒದಗಿಸಬೇಕು ಹಾಗೂ ಕಾಮಗಾರಿಗಳನ್ನು ನಿಗದಿತ ಸಮಯದೊಳಗಾಗಿ ಪೂರ್ಣಗೊಳಿಸುವತ್ತ ವಿಶೇಷ ಗಮನ ಹರಿಸಬೇಕು. ಉದ್ಯೋಗ ಮಾಡಿದ ಕೂಲಿಕಾರರ ವೇತನ ಪಾವತಿಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಬೇಕು. ಪ್ರತಿ ಹಂತದಲ್ಲೂ ಪಾರದರ್ಶಕತೆ ಕಾಪಾಡಬೇಕು. ಎಂಐಎಸ್ ನಲ್ಲಿ ಸಮಯಕ್ಕೆ ಸರಿಯಾಗಿ ಮಾಹಿತಿ ದಾಖಲಿಸಬೇಕು. ಜೊತೆಗೆ ನೀರಿನ ಸಂರಕ್ಷಣೆ, ಮಣ್ಣಿನ ಸಂರಕ್ಷಣೆ, ಹಸಿರು ಪರಿಸರ ಅಭಿವೃದ್ಧಿಗೆ ಸಂಬಂಧಿಸಿದ ಕಾಮಗಾರಿಗಳಿಗೆ ಹೆಚ್ಚಿನ ಆದ್ಯತೆ ನೀಡುವಂತೆ ಸೂಚಿಸಿದರು.



ಮನರೇಗಾ ಯೋಜನೆಯಡಿ ತಾಲೂಕುವಾರು ಗುರಿ ನಿಗದಿಪಡಿಸಲಾಗಿದೆ. ನಿಗದಿಪಡಿಸಿರುವ ಮಾನವ ದಿನಗಳ ಸೃಜನೆ ಮಾಡಿ ಗುರಿ ಸಾಧಿಸಲು ಅಧಿಕಾರಿಗಳು ಕ್ರಮ ವಹಿಸಬೇಕು. ಈಗಾಗಲೇ ಅನುಮೋದನೆಗೊಂಡ ಪ್ರಗತಿ ಹಂತದ ಕೂಲಿ ಆಧಾರಿತ ಸಮುದಾಯ ಹಾಗೂ ವೈಯಕ್ತಿಕ ಕಾಮಗಾರಿಗಳಡಿ ಪ್ರತಿ ಗ್ರಾ.ಪಂ.ಗಳಲ್ಲಿ ಎನ್.ಎಮ್.ಆರ್. ಜನರೇಟ್ ಮಾಡಿ ಗ್ರಾಮೀಣ ಕೂಲಿಕಾರರಿಗೆ ಉದ್ಯೋಗ ಒದಗಿಸಬೇಕು. ಎಷ್ಟೋ ಗ್ರಾಮೀಣ ಪ್ರದೇಶಗಳಲ್ಲಿ ನರೇಗಾ ಯೋಜನೆಯ ಮೇಲೆ ಅವಲಂಬಿತರಾಗಿದ್ದಾರೆ. ಅಂತಹ ಕುಟುಂಬಗಳಿಗೆ ಉದ್ಯೋಗ ಒದಗಿಸಿ ನಿಗದಿತ ಗುರಿ ಸಾಧಿಸಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯ ಪ್ರತಿ 211 ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಸಮುದಾಯ ಕಾಮಗಾರಿಗಳನ್ನು ಆರಂಭಿಸಿ ಕೂಲಿಕಾರರ ಫೇಸ್ ಅಥೆಂಟಿಕೇಷನ್‌ನ್ನು 2 ದಿನಗಳಲ್ಲಿ ಕಡ್ಡಾಯವಾಗಿ ಶೇ.100ರಷ್ಟು ಆರಂಭಿಸಬೇಕು. ಉದ್ಯೋಗ ಒದಗಿಸಿರುವ ಎಲ್ಲ ಕೂಲಿಕಾರರಿಗೆ ನಿಗದಿತ ಸಮಯದಲ್ಲಿ ಕೂಲಿ ಪಾವತಿಸಲು ಕ್ರಮ ಕೈಗೊಳ್ಳಬೇಕು. ಇಲ್ಲಿಯ ವರೆಗಿನ ಪ್ರಗತಿ ಹಂತದಲ್ಲಿರುವ ಎಲ್ಲ ಕಾಮಗಾರಿಗಳನ್ನು ಕೂಡಲೇ ಶೇ.100 ರಷ್ಟು ಪೂರ್ಣಗೊಳಿಸಬೇಕು. ಕಳೆದ 2025-26ನೇ ಸಾಲಿನಲ್ಲಿ ಎಲ್ಲ ಅನುಮೋದಿತ ಕಾಮಗಾರಿಗಳಿಗೆ ಎನ್.ಎಂ.ಆರ್ ತೆಗೆಯಬೇಕು. ಈ ಎನ್.ಎಂ.ಆರ್ ಗಳನ್ನು ಶೂನ್ಯ ಮಾಡದೇ ಕಡ್ಡಾಯವಾಗಿ ಎಮ್.ಐ.ಎಸ್ ಮಾಡಬೇಕು. ನರೇಗಾ ಕೂಲಿಕಾರರ ಇ-ಕೆವೈಸಿ ಮಾಡದಿದ್ದಲ್ಲಿ ಕೂಲಿಕಾರರಿಗೆ ಎನ್.ಎಂ.ಆರ್ ಜನರೇಟ್ ಮಾಡಲು ಸಾಧ್ಯವಿಲ್ಲ. ಹಾಗಾಗಿ ಮುಂಬರುವ ಒಂದು ವಾರದಲ್ಲಿ ಕಡ್ಡಾಯವಾಗಿ ಎಲ್ಲ ನೋಂದಾಯಿತ ಕೂಲಿಕಾರರ ಇ-ಕೆವೈಸಿಯನ್ನು ಶೇ.100 ರಷ್ಟು ಪೂರ್ಣಗೊಳಿಸಬೇಕು. ಈ ವಿಷಯದ ಕುರಿತು ಸಂಬಂಧಪಟ್ಟ ಸಿಬ್ಬಂದಿಗೆ ಪ್ರಗತಿ ಸಾಧಿಸಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪ್ರಸ್ತುತ 2026-27ನೇ ಸಾಲಿನ ಕ್ರಿಯಾ ಯೋಜನೆಯ ಕಾಮಗಾರಿಗಳನ್ನು ಈಗಾಗಲೇ ತಂತ್ರಾಂಶದಲ್ಲಿ ಎಂಟ್ರಿ ಮಾಡಲಾಗಿದ್ದು, ಗ್ರಾಮ ಪಂಚಾಯತಿ ಲಾಗಿನ್‌ನಲ್ಲಿರುವ ಎಲ್ಲ ಕಾಮಗಾರಿಗಳನ್ನು ಎರಡು ದಿನಗಳಲ್ಲಿ ತಾಲೂಕು ಪಂಚಾಯತಿ ಲಾಗಿನ್‌ಗೆ ಕಳುಹಿಸಬೇಕು. ಬಳಿಕ, ರಾಜ್ಯ, ಜಿಲ್ಲಾ ಗುಣ ನಿಯಂತ್ರಣ, ಸಾಮಾಜಿಕ ಲೆಕ್ಕ ಪರಿಶೋಧನೆ ಮತ್ತು ಒಂಬಡ್ಸ್ ಮನ್ ವಸೂಲಾತಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಾಬೀತಾದ ಪ್ರಕರಣಗಳ ಮೊತ್ತವನ್ನು ಕೂಡಲೇ ವಸೂಲಾತಿ ಮಾಡಿ ಬ್ಯಾಂಕ್‌ಗೆ ಭರಣಾ ಮಾಡಿ ಜಿಲ್ಲಾ ಪಂಚಾಯತಿಗೆ ವರದಿ ಸಲ್ಲಿಸಬೇಕು ಎಂದರು.

ತಾಲೂಕು ಹಂತದಲ್ಲಿ ಪ್ರಕರಣವಾರು ವಸೂಲಾತಿ ಪ್ರಗತಿ ಕುರಿತು ಪರಿಶೀಲಿಸಿ, ಈ ಪ್ರಕರಣಗಳನ್ನು ಸಾಬೀತುಪಡಿಸಲು ಕ್ರಮ ಕೈಗೊಳ್ಳಬೇಕು. ಪ್ರತಿ ವಾರ ಅಡಹಾಕ್ ಸಮಿತಿ ಸಭೆಗಳನ್ನು ಏರ್ಪಡಿಸಿ, ಬಾಕಿ ಉಳಿದಿರುವ ಎಲ್ಲ ಪ್ರಕರಣಗಳನ್ನು ಇತ್ಯರ್ಥಗೊಳಿಸಬೇಕು. ಎ.ಟಿ.ಆರ್‌ವರದಿಯನ್ನು ತಂತ್ರಾಂಶದಲ್ಲಿ ಅಪ್ಲೋಡ್ ಮಾಡುವುದು. ಈ ವಿಷಯದ ಕುರಿತು ಸಂಬಂಧಪಟ್ಟ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪ್ರಗತಿ ಸಾಧಿಸಲು ಇದೇ ವೇಳೆ ಸೂಕ್ತ ನಿರ್ದೇಶನ ನೀಡಿದರು. ಮಹಾತ್ಮ ಗಾಂಧಿ ನರೇಗಾ ಯೋಜನೆ ಹಾಗೂ ಅನುಷ್ಠಾನ ಇಲಾಖೆಗಳ ಅಡಿಯಲ್ಲಿ ಪ್ರಗತಿ ಹಂತದ ಎಲ್ಲ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಎಲ್ಲ ನರೇಗಾ ಸಿಬ್ಬಂದಿ ಉಪಸ್ಥಿತರಿದ್ದರು.

- ಕೆಲಸದ ಬೇಡಿಕೆ ಸಲ್ಲಿಸಿದ ಪ್ರತಿಯೊಬ್ಬ ಅರ್ಹ ಕುಟುಂಬಗಳಿಗೆ ಕಾಲಮಿತಿಯೊಳಗೆ ಉದ್ಯೋಗ ಒದಗಿಸಬೇಕು. ಕಾಮಗಾರಿಗಳನ್ನು ನಿಗದಿತ ಸಮಯದೊಳಗಾಗಿ ಪೂರ್ಣಗೊಳಿಸುವತ್ತ ವಿಶೇಷ ಗಮನ ಹರಿಸಬೇಕು.
- ಉದ್ಯೋಗ ಮಾಡಿದ ಕೂಲಿಕಾರರ ವೇತನ ಪಾವತಿಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಬೇಕು. ಪ್ರತಿ ಹಂತದಲ್ಲೂ ಪಾರದರ್ಶಕತೆ ಕಾಪಾಡಬೇಕು. ಎಂಐಎಸ್ ನಲ್ಲಿ ಸಮಯಕ್ಕೆ ಸರಿಯಾಗಿ ಮಾಹಿತಿ ದಾಖಲಿಸಬೇಕು.

ಹೆಣ್ಣುಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೂ ಆದ್ಯತೆ ನೀಡಿ

ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಅಂಜುಮನ್ ಅಧ್ಯಕ್ಷ ಲಾಳೆಮಶಾಕ್ ಅವಟಿ ಸಲಹೆ

• **ಕನ್ನಡಪ್ರಭ ವಾರ್ತೆ** ನಾಲತವಾಡ

ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ನೀಡುವುದು ಪ್ರತಿಯೊಬ್ಬ ಪಾಲಕರ ಜವಾಬ್ದಾರಿಯಾಗಿದ್ದು, ವಿಶೇಷವಾಗಿ ಮುಸ್ಲಿಂ ಸಮಾಜ ಶಿಕ್ಷಣದ ಕಡೆ ಹೆಚ್ಚಿನ ಒತ್ತು ನೀಡಿ ಹೆಣ್ಣುಮಕ್ಕಳ ಉನ್ನತ ವಿದ್ಯಾಭ್ಯಾಸಕ್ಕೂ ಆದ್ಯತೆ ನೀಡಬೇಕು ಎಂದು ಅಂಜುಮನ್ ಅಧ್ಯಕ್ಷ ಲಾಳೆಮಶಾಕ್ ಅವಟ ಹೇಳಿದರು.

ಪಟ್ಟಣದ ಜಾಮೀಯಾ ಮಸೀದಿಯಲ್ಲಿ ಅಂಜುಮನ್ ಕಮಿಟಿ ವತಿಯಿಂದ ಪ್ರಸ್ತುತ ಸಾಲಿನ ಪಿಯುಸಿ ಹಾಗೂ ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದಲ್ಲಿ ಮಾತನಾಡಿದ ಅವರು, ಹಲವಾರು ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಗಳಿಸಿ ಸಮಾಜಕ್ಕೆ ಹೆಮ್ಮೆ ತಂದಿದ್ದಾರೆ. ಪಿಯುಸಿ ನಂತರ ಹೆಣ್ಣುಮಕ್ಕಳ ಶಿಕ್ಷಣವನ್ನು ನಿಲ್ಲಿಸುವ ಬದಲು, ಪಾಲಕರು ಮಕ್ಕಳ ಮೇಲೆ ವಿಶ್ವಾಸವಿಟ್ಟು ಹೆಚ್ಚಿನ ಶಿಕ್ಷಣ ನೀಡಲು ಮುಂದಾಗಬೇಕು. ಒಂದು ಹೆಣ್ಣು ಮಗು ಶಿಕ್ಷಣವಂತಳಾದರೆ ಇಡೀ ಕುಟುಂಬವೇ ಶಿಕ್ಷಣದ ಬೆಳಕನ್ನು ಕಾಣುತ್ತದೆ ಎಂದು ತಿಳಿಸಿದರು.

ಅಂಜುಮನ್ ಸದಸ್ಯ ಮೌಲಾಸಾಬ್ ರಕ್ಕಸಗಿ ಮಾತನಾಡಿ, ವಿದ್ಯಾರ್ಥಿಗಳನ್ನು ಸನ್ಮಾನಿಸುವ ಮೂಲಕ ಅವರನ್ನು ಮತ್ತಷ್ಟು ಪ್ರೋತ್ಸಾಹಿಸುವ ಕಾರ್ಯವನ್ನು ಅಂಜುಮನ್ ಕಮಿಟಿ ಮಾಡುತ್ತಿದೆ. ಪಾಲಕರು ಮಕ್ಕಳ ಶಿಕ್ಷಣಕ್ಕಾಗಿ ಮಾಡುವ ಶ್ರಮವನ್ನು ಅರ್ಥಮಾಡಿಕೊಂಡು ವಿದ್ಯಾರ್ಥಿಗಳು ಉತ್ತಮವಾಗಿ ಅಭ್ಯಾಸ ಮಾಡಿ ಪಾಲಕರಿಗೂ ಊರಿಗೂ ಕೀರ್ತಿ ತರಬೇಕು ಎಂದರು.



ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಎ.ಎಚ್.ಖಾಜಿ ಹಾಗೂ ಜಾಮಿಯಾ ಮಸಿದಿ ಇಮಾಮ್ ಮಹ್ಮದ್ ಇಸ್ಮಾಯಿಲ್ ಮುಲ್ಲಾ ಮಾತನಾಡಿ, ಹೆಣ್ಣುಮಕ್ಕಳು ನಿರಂತರವಾಗಿ ಉತ್ತಮ ಅಂಕಗಳೊಂದಿಗೆ ಸಾಧನೆ ಮಾಡುತ್ತಿರುವುದು ಶ್ಲಾಘನೀಯ. ಎಂದರು.

ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಮದಿಯಾಬೇಗಂ ನಾಯ್ಕೋಡಿ, ಶಿಮರ್‌ಅಸ್ಲಂ ಒತಂದಾರ, ಬಿಬಿ ಆಯಿಶಾ ಅವಟಿ, ಫಯಾಜ್ ಗಂಗೂರ, ಮಾಹಿಯಾ ನಾಡದಾಳ, ಉತಫತುನ್ನಿಸಾ ಎತ್ತಿನಮನಿ, ಯಾಸ್ಮೀನ್ ಮಕಾಂದಾರ, ಬಿಬಿ ಫಾತಿಮಾ ನಾಯ್ಕೋಡಿ, ಆಸ್ಮಾ ನದಾಫ್, ಜಹಾಪರವೀನ್ ಅಯ್ಯನಗುಡಿ ಹಾಗೂ ಮಿಸ್ಬಾ ಮುಲ್ಲಾ ಅವರನ್ನು ಸನ್ಮಾನಿಸಲಾಯಿತು.

ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಫರಹೀನ್ ಬೇನೂರ, ಅರ್ಫಾನ ಮಲಗಲದಿನ್ನಿ, ಹಫ್ಸಾನಾ ಸುಗಂದಿ, ಸಮೀರ ಹಣಗಿ, ಸಿಮ್ರನ್ ಕೊಣ್ಣೂರ, ತೈಯಬಾ ಮುಲ್ಲಾ, ರಿಜ್ವಾನಾ ಕಸ್ಸಾಬ, ಉಮ್ಮತ್ ವಾ ಜಾಸ್ಮೀನ್ ಬೆಕಿನಾಳ, ಅಲ್ಮಾಸ್ ಮಾವಿನಭಾವಿ, ದಸ್ತಗೀರ್‌ಬಿದರಕೋಟಿ, ರಿಹಾನ ಮಾರನಾಳ, ಮಹ್ಮದ್ ತಾಹೀರ್‌ಮೂಲಿಮನಿ ಹಾಗೂ ಮುಸ್ಕಾನ್ ನಾಡದಾಳ ವಿದ್ಯಾರ್ಥಿಗಳಿಗೂ ಸನ್ಮಾನ ನೀಡಿ ಪ್ರೋತ್ಸಾಹಿಸಲಾಯಿತು.

ಇದೇ ವೇಳೆ ನಾಲತವಾಡ ಸಮುದಾಯ ಆರೋಗ್ಯ ಕೇಂದ್ರದ ಆರೋಗ್ಯ ರಕ್ಷಾ ಸಮಿತಿ ಸದಸ್ಯ ಮಹ್ಮದಯೂನುಸ್ ಮೂಲಿಮನಿ ಅವರಿಗೂ ವಿಶೇಷ ಸನ್ಮಾನ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಅಂಜುಮನ್ ಕಮಿಟಿ ಉಪಾಧ್ಯಕ್ಷ ಬಾಷೇಸಾಬ್ ತೆಗ್ಗಿನಮನಿ, ಅಬ್ದುಲ್ ಗನಿ ಖಾಜಿ, ಇಬ್ರಾಹಿಂ ಮುಲ್ಲಾ, ಉಮರಫಾರುಕ್ ಮೂಲಿಮನಿ, ಲಾಲಸಾಬ್ ಬಿದರಕೋಟಿ, ಜಾಕೀರ್ ಮಾವಿನಭಾವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾಯಕಯೋಗಿ ರಾಜ್ಯ ಪ್ರಶಸ್ತಿ ಪ್ರದಾನ

ಮುದ್ದೇಬಿಹಾಳ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಸೂಲಿಬೆಲೆಯಲ್ಲಿ ಜರುಗಿದ ಭವ್ಯ ಸಮಾರಂಭದಲ್ಲಿ ಸ್ಥಳೀಯ ಹಸಿರು ತೋರಣ ಗೆಳೆಯರಬಳಗದಸಂಚಾಲಕಮಹಾಬಳೇಶ್ವರ ಗಡೇದ ಅವರಿಗೆ ರಾಜ್ಯಮಟ್ಟದ ಕಾಯಕ ಯೋಗಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ರಾಜ್ಯ ವೈಜ್ಞಾನಿಕ ಮತ್ತು ಸಂಶೋಧನಾ ಪರಿಷತ್ತಿನ ಅಧ್ಯಕ್ಷ ಹುಲಿಕಲ್ಲ ನಟರಾಜ ಹಾಗೂ ಇಸ್ರೋ ಬಾಹ್ಯಾಕಾಶ ಸಂಸ್ಥೆಯ ಮಾಜಿ ಅಧ್ಯಕ್ಷ ಎ.ಎಸ್.ಕಿರಣಕುಮಾರ ಅವರು ಪ್ರಶಸ್ತಿ ಪ್ರದಾನ ಮಾಡಿ ಶುಭ ಹಾರೈಸಿದರು. ಈ ವೇಳೆ ಪತ್ರಕರ್ತ ಶಿವರಂಜನ್ ಸತ್ಯಂಪೇಟೆ, ಡಾ.ಆಂಜನಪ್ಪ,



ವಿಜಯಪುರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಘವೇಂದ್ರ ಮಿಸಾಳೆ, ಮುಖಂಡರಾದ ಮಲ್ಲಿಕಾರ್ಜುನ, ಶರಣಬಸಪ್ಪ ಗಡೇದ, ಸೋಹೇಲ್ ಬಳಬಟ್ಟಿ ಹಾಗೂ ವಿಜಯಲಕ್ಷ್ಮೀ ಗಡೇದ ಸೇರಿದಂತೆ ಅಪಾರ ಸಂಖ್ಯೆಯ ಹಿತೈಷಿಗಳು ಭಾಗವಹಿಸಿ ಅಭಿನಂದಿಸಿದರು.

ಜಿಲ್ಲೆಯಲ್ಲಿ ಎಲ್ಲಿಯೂ ಇಲ್ಲದ ಜಿಟಿಟಿಸಿ ಕಾಲೇಜು ಇಂಡಿಗೆ



• **ಕನ್ನಡಪ್ರಭ ವಾರ್ತೆ** ಇಂಡಿ

ಗಡಿ ಭಾಗದಲ್ಲಿರುವ ವಿದ್ಯಾರ್ಥಿಗಳು ಉದ್ಯೋಗ ಆಧಾರಿತ ಶಿಕ್ಷಣ ಕಲಿಯಬೇಕು. ಸ್ವಾವಲಂಬಿ ಬದುಕು ಸಾಗಿಸಬೇಕೆಂದು ಸದುದ್ದೇಶದಿಂದ ಜಿಲ್ಲೆಯಲ್ಲಿಯೇ ಇಲ್ಲದ ಜಿಟಿಟಿಸಿ ಕಾಲೇಜು ಗಡಿಭಾಗ ಇಂಡಿ ತಾಲೂಕಿಗೆ ತಂದಿರುವೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು. ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2025-26ನೇ ಸಾಲಿನ ಸಾಂಸ್ಕೃತಿ, ಕ್ರೀಡೆ, ಎನ್‌ಎಸ್‌ಎಸ್, ಸ್ಕೌಟ್ಸ್ ಆ್ಯಂಡ್ ಗೈಡ್ಸ್, ರೆಡ್ ಕ್ರಾಸ್ ಹಾಗೂ ವಿವಿಧ ಘಟಕಗಳ ಸಮಾರೋಪ ಸಮಾರಂಭ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಬಡ ಕುಟುಂಬಗಳು ಕೂಲಿ ಕಾರ್ಮಿಕರು ಉದ್ಯೋಗ ಆರಿಸುತ್ತ ಬೇರೆ ರಾಜ್ಯಗಳಿಗೆ ಹೋದರೂ ಅವರ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದೆಂಬ ಚಿಂತನೆಯಿಂದ ಕಾರ್ಮಿಕ ಮಕ್ಕಳ ವಸತಿ ಶಾಲೆ ಮಂಜೂರು ತಂದಿರುವೆ. ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಉಪನ್ಯಾಸಕರು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಆರ್.ಎಚ್. ರಮೇಶ ವಹಿಸಿ ಮಾತನಾಡಿದರು. ಲಿಂಬೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಭೀಮಣ್ಣ ಕವಲಗಿ, ಝಳಕಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ವಿವೇಕಾನಂದ ಉಘಡೇ ಉಪಸ್ಥಿತರಿದ್ದರು.

ಶೈಕ್ಷಣಿಕ, ಆರ್ಥಿಕ, ಔದ್ಯೋಗಿಕ ಸೇರಿದಂತೆ ಇತರೆ ರಂಗದಲ್ಲಿ ಹಿಂದುಳಿದ ಗಡಿ ತಾಲೂಕು ಇಂಡಿ ಸರ್ವ ರಂಗದಲ್ಲಿ ಪ್ರಗತಿ ಸಾಧಿಸಬೇಕೆಂದು ಚಿಂತನೆಯಿಂದ ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದೇನೆ. ಇಂಡಿಯಲ್ಲಿ ಮಿನಿ ವಿಧಾನಸೌಧದ ಬಳಿ ನಡೆಯುತ್ತಿರುವ ಇಂದಿರಾ ಕ್ಯಾಂಟಿನ್ ಬಡವರಿಗೆ, ಕೂಲಿಕಾರ್ಮಿಕರಿಗೆ ಅನ್ನ ನೀಡುವ ಕೇಂದ್ರವಾಗಿದೆ. ನಗರದ ವಿಜಯಪುರ ರಸ್ತೆಯ ಆದರ್ಶ ವಿದ್ಯಾಲಯದ ಬಳಿ ಇನ್ನೊಂದು ಇಂದಿರಾ ಕ್ಯಾಂಟಿನ್ ಆರಂಭಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡುವೆ.

• **ಯಶವಂತರಾಯಗೌಡ ಪಾಟೀಲ** ಶಾಸಕರು.

ಪದಾಧಿಕಾರಿಗಳ ಆಯ್ಕೆ...

ನೂತನ ಪದಾಧಿಕಾರಿಗಳನ್ನು ಸನ್ಮಾನದಲ್ಲಿ ಚಂದ್ರಕಾಂತ ಸಿಂಗೆ ಕರೆ

ಡಾ.ಬಿ.ಆರ್.ಅಂಬೇಡ್ಕರ್ ತತ್ವಗಳನ್ನು ಬೆಳೆಸಲು ಸಂಘಟನೆಗೆ ಬನ್ನಿ

• **ಕನ್ನಡ ಪ್ರಭ ವಾರ್ತೆ** ಕೊಲ್ಹಾರ

ಆತ್ಮವಂಚನೆ ಮಾಡಿಕೊಂಡು ರಾಜಕಾರಣಿಗಳ ಹಿಂದೆ ತಿರುಗುವವರು ದಲಿತ ಸಂಘಟನೆಗೆ ಬರಬೇಡಿ. ಅಂಬೇಡ್ಕರರ ವಿಚಾರಗಳನ್ನು ಹಾಗೂ ತತ್ವಗಳನ್ನು ಬೆಳೆಸಲು, ಉಳಿಸಿಕೊಂಡು ಹೋಗುವವರು ಮಾತ್ರ ಬರಬಹುದು ಎಂದು ವಿಜಯಪುರ ಜಿಲ್ಲಾ ಸಂಚಾಲಕ ಚಂದ್ರಕಾಂತ ಸಿಂಗೆ ಆಹ್ವಾನಿಸಿದರು.

ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ನಾಗವಾರ ಬಣ)ದ ವಿಜಯಪುರ ಜಿಲ್ಲಾ ಸಮಿತಿ ವತಿಯಿಂದ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯ್ಕೆಯಾದ ಕೊಲ್ಹಾರ ತಾಲೂಕು ನೂತನ ಪದಾಧಿಕಾರಿಗಳನ್ನು ಸನ್ಮಾನಿಸಿ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ದಲಿತರ ಮತಗಳನ್ನು ಪಡೆದು ಅಧಿಕಾರಕ್ಕೆ ಬಂದ ರಾಜಕಾರಣಿಗಳು ದಲಿತರ ಮೇಲೆ ದೌರ್ಜನ್ಯವಾದಾಗ, ಹಕ್ಕುಗಳನ್ನು ಕಿತ್ತಕೊಂಡಾಗ ನೆರವಿಗೆ ಬಾರದ ಸಂದರ್ಭದಲ್ಲಿ ಈ ದಲಿತ ಸಂಘರ್ಷ ಸಮಿತಿ ಹುಟ್ಟಿಕೊಂಡಿತು.



ದಲಿತ ಸಂಘರ್ಷ ಸಮಿತಿ ಈ ನಾಡಿಗೆ ಮುಖ್ಯಮಂತ್ರಿ, ದೇಶಕ್ಕೆ ಪ್ರಧಾನ ಮಂತ್ರಿಗಳನ್ನು ಕೊಟ್ಟಿದೆ. ಇಂಥ ಸಂಘಟನೆಯನ್ನು ರಾಜಕೀಯ ಶಕ್ತಿಯಿಂದ ಇಬ್ಭಾಗ ಮಾಡಲಾಯಿತು ಎಂದು ದೂರಿದರು.

ಇಂದು ನೂತನವಾಗಿ ಆಯ್ಕೆಯಾದಂತಹ ತಾಲೂಕ ಘಟಕ ಹಾಗೂ ಗ್ರಾಮ ಘಟಕದ ಪದಾಧಿಕಾರಿಗಳು ಬುದ್ಧ, ಬಸವ, ಅಂಬೇಡ್ಕರರ ತತ್ವ, ಸಿದ್ಧಾಂತ ಹಾಗೂ ವಿಚಾರಗಳನ್ನು ಪಾಲಿಸಬೇಕು ಇದು ಬಹಳ ಅವಶ್ಯವಿದೆ. ಇವತ್ತು ಎಲ್ಲರೂ ಬಣ್ಣದ ಲೋಕದಲ್ಲಿ ತಿರುಗಾಡುತಿದ್ದೇವೆ. ಆದರೆ, ಇದು ಬಹಳ ದಿನ ಇರುವುದಿಲ್ಲ. ಈ ಸಮಿತಿಯಲ್ಲಿ ಕಾರ್ಯನಿರ್ವಹಿಸುವವರು ಮೇಲ್ವರ್ಗದ ಜನರು, ಶ್ರೀಮಂತರು ಹಾಗೂ ರಾಜಕಾರಣಿಗಳ ಜೊತೆ ಅನಾವಶ್ಯಕವಾಗಿ ಜಗಳ ಮಾಡುವಂತಿಲ್ಲ. ದಲಿತರ ಮೇಲೆ ದೌರ್ಜನ್ಯವಾದಾಗ, ಅತ್ಯಾಚಾರವಾದಾಗ, ಸೌಲಭ್ಯ ಗಳನ್ನು ದೋಚಿಕೊಂಡು ಹೋದಾಗ ಅವರು ಯಾರೇ ಇರಲಿ ಅವರ ವಿರುದ್ಧ ಹೋರಾಟ ಮಾಡಬೇಕು. ಈ ಸಂಘಟನೆಯಿಂದ ಸಮಾಜದಲಿರುವಂತ ದುಶ್ಚಟಗಳನ್ನು, ಮೂಢ ನಂಬಿಕೆಗಳನ್ನು, ಅನಿಷ್ಟ ಪದ್ಧತಿಗಳನ್ನು ತೊಲಗಿಸಲು ಪಣ ತೊಡೋಣ ಎಂದು ಸಲಹೆ ನೀಡಿದರು.

ಸಾಮಾಜಿಕ ಹೋರಾಟಗಾರ, ಡಿಎಸ್ಎಸ್ ಮುಖಂಡ ದಲಿತ ಸಂಘರ್ಷ ಸಮಿತಿ ಸಂಚಾಲಕ ವೈ.ಎಸ್.ಗುಣಕಿ ಮಾತನಾಡಿ, ಇಂದಿನ ಕಾಲದಲ್ಲಿ ಸಂಘಟನೆ ಮಾಡುವುದು ಬಹಳ ಅವಶ್ಯಕತೆಯಿದೆ. ನಮ್ಮ ದೇಶ ಪ್ರಬುದ್ಧ ಭಾರತ ಆಗಬೇಕಾದರೆ ಜನ ಸಾಮಾನ್ಯರು ಒಂದಾಗಬೇಕಾದ ಅನಿವಾರ್ಯತೆಯಿದೆ. ಅದಕ್ಕಾಗಿ ಸಂಘಟನೆ ಅವಶ್ಯಕತೆ ಬಹಳಷ್ಟಿದೆ. ಸಂಘಟನೆ ಮೂಲಕ ನಮ್ಮ ಹಕ್ಕುಗಳನ್ನು ಪಡೆದುಕೊಳ್ಳಲು ಸಾಧ್ಯವಿದೆ ಎಂದರು. ಈ ವೇಳೆ ಸಂಚಾಲಕ ಚನ್ನು ಕಟ್ಟಿಮನಿ ಮಾತನಾಡಿದರು. ಬ.ಬಾಗೇವಾಡಿ ತಾಲೂಕು ಸಂಚಾಲಕ ಯಮನಪ್ಪ ಛಲವಾದಿ, ಚಂದ್ರಶೇಖರ ನಾಲತ್ವಾಡ, ಸಂಗು ಛಲವಾದಿ(ನಾಗರದಿನ್ನಿ), ಯಲ್ಲಪ್ಪ ಛಲವಾದಿ, ಶೇರಣಪ್ಪ ಕಾಳಿ, ಪ್ರಕಾಶ ಗರಸಂಗಿ, ಹಣಮಂತ ಹರಿಜನ್, ಗಂಗಾಧರ ಆರೇರ್, ಮಹೇಶ ಜವಳಗಿ, ಬಸವರಾಜ ದೊಡಮನಿ, ಕೇದರನಾತ ಮಠ ಹಾಗೂ ಸಮಾಜದ ಮುಖಂಡರು ಇತರರು ಭಾಗವಹಿಸಿದ್ದರು .

ಕೊಲ್ಹಾರ ತಾಲೂಕಿನ ಪದಾಧಿಕಾರಿಗಳು

ಸಂಚಾಲಕರಾಗಿ ಈರಣ್ಣ ಹರಿಜನ್ (ಮಸೂತಿ), ಸಂ ಸಂಚಾಲಕರಾಗಿ ಶಂಕ್ರೆಪ್ಪ ಚಲವಾದಿ (ಮಟ್ಟಿಹಾಳ), ಮಾರುತಿ ಚಲವಾದಿ (ಮಸೂತಿ), ಚಂದ್ರಕಾಂತ ಚಲವಾದಿ (ಅರಷಣಗಿ), ಖಜಾಂಚಿಯಾಗಿ ಪರಶುರಾಮ ಆಸಂಗಿ (ಆಸಂಗಿ), ಕಾರ್ಯಕಾರಿ ಸದಸ್ಯರಾಗಿ ಮುತ್ತಪ್ಪ ಚಲವಾದಿ (ಮಟ್ಟಿಹಾಳ), ಚಂದ್ರಶೇಖರ ಚಲವಾದಿ (ಮಸೂತಿ) ಆಯ್ಕೆಯಾಗಿದ್ದಾರೆ.

ಮಸೂತಿ ಗ್ರಾಮ ಶಾಖೆ ಪದಾಧಿಕಾರಿಗಳು: ಸಂಚಾಲಕರಾಗಿ ಕಾಶಿಮ್ ಚಲವಾದಿ ಗುಡಿ ಮುಂದಿನ , ಸಂ ಸಂಚಾಲಕರಾಗಿ ಶ್ರೀಶೈಲ ಹೊಸೂರ, ಈರಪ್ಪ ರುದ್ರಗೊಳ, ಶೆಟ್ಟೆಪ್ಪ ಹರಿಜನ್, ಖಜಾಂಚಿಯಾಗಿ ಪ್ರಭು ರುದ್ರಗೊಳ, ಕಾರ್ಯಕಾರಿ ಸದಸ್ಯರಾಗಿ ಕುಬಪ್ಪ ಪೂಜಾರಿ, ಈರಪ್ಪ ಹಳ್ಳೂರ, ಸೋಮಲಿಂಗ ಗುಡಿಮುಂದಿನ ಆಯ್ಕೆಯಾಗಿದ್ದಾರೆ.

ಕಾಲುವೆ ಮೂಲಕ ಕೆರೆ ತುಂಬಿಸಬಲಾಗಿದೆ. ಭೀಮಾನದಿಗೆ ನೀರು ಹರಿದು ಬಿಡಲಾಗಿದೆ. ಇಷ್ಟು ಇದ್ದರೂ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ತೊಂದರೆ ತಲೆದೋರಿದೆ ಎಂಬ ದೂರು ಸಾರ್ವಜನಿಕರಿಂದ ಬಂದರೆ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆ ಮಾಡಲಾಗುತ್ತದೆ

• **ಯಶವಂತರಾಯಗೌಡ ಪಾಟೀಲ** ಶಾಸಕ

ನೀರಿನ ಸಂಗ್ರಹ ವರದಿ ಪ್ರತಿದಿನ ನೀಡಿ

ಟಾಸ್ಕ್‌ಫೋರ್ಸ್ ಸಭೆಯಲ್ಲಿ ಶಾಸಕ ಯಶವಂತರಾಯಗೌಡ ಪಾಟೀಲ ಸೂಚನೆ

• **ಕನ್ನಡಪ್ರಭ ವಾರ್ತೆ** ಇಂಡಿ

ಉಜನಿಯ ಜಲಾಶಯದಿಂದ ಭೀಮಾನದಿಗೆ 16 ಟಿಎಂಸಿ ನೀರು ಬಿಟ್ಟಿದ್ದು, ಇದರಿಂದ ಇಂಡಿ ನಗರ ಹಾಗೂ ನದಿ ದಂಡೆಯ ಮೇಲಿನ ಗ್ರಾಮಗಳ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲವಾಗಲಿದೆ. ಆದರೆ, ಅಧಿಕಾರಿಗಳು ಭೀಮಾನದಿ ಬ್ಯಾರೇಜ್‌ಗಳಲ್ಲಿನ ನೀರಿನ ಸಂಗ್ರಹದ ಕುರಿತು ಪ್ರತಿನಿತ್ಯ ವರದಿ ನೀಡಬೇಕು ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಕರೆದ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕಂದಾಯ ಉಪ ವಿಭಾಗಾಧಿಕಾರಿ ನಿತ್ಯ ಗ್ಯಾರೇಜ್‌ಗಳ ಪರಿಶೀಲನೆ ಮಾಡಬೇಕು. ಪ್ರತಿ ಕೆರೆಯಲ್ಲಿ ಕನಿಷ್ಠ ಶೇ.50 ರಷ್ಟು ನೀರು ಸಂಗ್ರಹ ಇರುವಂತೆ ನೋಡಿಕೊಳ್ಳಬೇಕು. ತಾಲೂಕಿನ ಯಾವುದೇ ಜನವಸತಿ ಪ್ರದೇಶ(ಅಡವಿ ಪ್ರದೇಶ) ಹಾಗೂ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ನಿಗಾ ವಹಿಸಬೇಕು. ಬೇಸಿಗೆಯಲ್ಲಿ ಎಲ್ಲಿಯೂಕುಡಿಯುವನೀರಿನತೊಂದರೆಯಾಗಬಾರದು. ನಿಂಬಾಳ ಕೆಡಿಯಲ್ಲಿ ನಿರ್ಮಾಣವಾಗುತ್ತಿರುವ ವಿದ್ಯುತ್ ವಿತರಣಾ ಕೇಂದ್ರ ಬೇಗನೆ ಪೂರ್ಣಗೊಳಿಸಬೇಕು. ಕುಡಿಯುವ ನೀರಿನ ವಿಷಯದಲ್ಲಿ ಗ್ರಾಮ ಪಂಚಾಯತಿ ಆಡಳಿತಾಧಿಕಾರಿಗಳು ಹಾಗೂ ಅಭಿವೃದ್ಧಿ ಅಧಿಕಾರಿಗಳು ಸಮನ್ವಯತೆ ಸಾಧಿಸಿ, ಸಕ್ರಿಯವಾಗಿ ತೊಡಗಬೇಕು. ಪ್ರತಿ ಸೋಮವಾರ ಟಾಸ್ಕ್‌ಫೋರ್ಸ್ ಸಭೆ ನಡೆಸಿ ಕುಡಿಯುವ ನೀರಿನ ಸಮಸ್ಯೆ ಕುರಿತು ಮಾಹಿತಿ ಸಂಗ್ರಹಿಸಿ ಪರಿಹಾರ ಕಂಡುಕೊಳ್ಳಬೇಕು ಎಂದು ಸೂಚಿಸಿದರು.

ಇಂಡಿ ನಗರದಲ್ಲಿ ಪೈಪಲೈನ್ ಕಾಮಗಾರಿ ನಡೆದಿರುವುದರಿಂದ ಭೂಮಿ ಅಗೆಯುವಾಗ ಕುಡಿಯುವ ನೀರಿನ ಪೈಪ್ ಹಾಗೂ ಇತರೆ ವಸ್ತುಗಳು ಹಾನಿಯಾದರೆ ಕೂಡಲೇ ದುರಸ್ತಿಗೊಳಿಸಬೇಕು, ಕ್ರಮ ವಹಿಸಬೇಕು. ಭೂಮಿ ಅಗೆಯುವುದರಿಂದ ರಸ್ತೆಯ ಮೇಲೆ ಬಿದ್ದಿರುವ ಧೂಳು ತೆರವುಗೊಳಿಸಲು ಕ್ರಮ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.



> ತಾಲೂಕು ಮಟ್ಟದ ಅಧಿಕಾರಿಗಳು, ಗ್ರಾಪಂ ಅಭಿವೃದ್ಧಿ ಅಧಿಕಾರಿಗಳು ಬೇಸಿಗೆ ಪೂರ್ಣಗೊಳ್ಳುವವರೆಗೆ ಜವಾಬ್ದಾರಿಯಿಂದ, ಕ್ರೀಯಾಶೀಲನೆಯಿಂದ ಕರ್ತವ್ಯ ನಿರ್ವಹಿಸಬೇಕು. ಕುಡಿಯುವ ನೀರಿನ ವಿಷಯದಲ್ಲಿ ಯಾರೂ ನಿರ್ಲಕ್ಷ್ಯ ವಹಿಸಬಾರದು.
>
> • **ಯಶವಂತರಾಯಗೌಡ ಪಾಟೀಲ** ಶಾಸಕರು.

ಕಾಲುವೆ ಮೂಲಕ ಕೆರೆ ತುಂಬಿಸಬಲಾಗಿದೆ. ಭೀಮಾನದಿಗೆ ನೀರು ಹರಿದು ಬಿಡಲಾಗಿದೆ. ಇಷ್ಟು ಇದ್ದರೂ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ತೊಂದರೆ ತಲೆದೋರಿದೆ ಎಂಬ ದೂರು ಸಾರ್ವಜನಿಕರಿಂದ ಬಂದರೆ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆ ಮಾಡಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಉಪ ವಿಭಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ಡಿವೈಎಸ್ಪಿ ಸದಾಶಿವ ಕಟ್ಟಿಮನಿ, ತಹಸೀಲ್ದಾರ್ ಬಿ.ಎಸ್. ಕಡಕಭಾವಿ, ತಾಪಂ ಇಒ ಮಹಾದೇವಪ್ಪ ಏವೂರ, ಪೌರಾಯುಕ್ತ ಶಿವಾನಂದ ಪೂಜಾರಿ, ಕೆಬಿಜೆಎನ್‌ಎಲ್ ಅಧಿಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ, ತೋಟಗಾರಿಕೆ ಎಡಿ ಎಚ್.ಎಸ್.ಪಾಟೀಲ, ಸಿಡಿಪಿಒ ಗೀತಾ ಗುತ್ತರಗಿಮಠ, ಆರ್‌ಎಫ್‌ಒ ಮಂಜುನಾಥ ಧೂಳೆ, ಸಂಗಾಲಕ, ಸಮಾಜ ಕಲ್ಯಾಣಾಧಿಕಾರಿ ಉಮೇಶ ಲಮಾಣಿ, ಬಿಸಿಎಂ ಅಧಿಕಾರಿ ಗದ್ಯಾಳ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಕೆಬಿಜೆಎನ್‌ಎಲ್ ಇಂಜನೀಯರ್,ನಗರ ನೀರು ಸರಬರಾಜು ಒಳಚರಂಡಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಆಡಳಿತಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಧೂಳಖೇಡ ಬಳಿಯ ಭೀಮಾನದಿಗೆ ಶಾಸಕ ಯಶವಂತರಾಯಗೌಡ ಭೇಟಿ

ಇಂಡಿ: ತಾಲೂಕಿನ ಭೀಮಾನದಿಗೆ ಉಜನಿ ಜಲಾಶಯದಿಂದ 16 ಟಿಎಂಸಿ ನೀರಿ ಹರಿದು ಬಿಟ್ಟಿರುವುದರಿಂದ ಧೂಳಖೇಡ-ಟಾಕಳಿ ಮುಂದೆ ಹರಿದಿರುವ ಭೀಮಾನದಿಗೆ ನೀರು ಬಂದಿರುವುದರಿಂದ ಶಾಸಕ ಯಶವಂತರಾಯಗೌಡ ಪಾಟೀಲ ಅವರು ಧೂಳಖೇಡ ಬಳಿ ಭೀಮಾನಿದಿಯಲ್ಲಿ ನಿರ್ಮಿಸಿದರುವ ಇಂಡಿ ನಗರಕ್ಕೆ ಕುಡಿಯುವ ನೀರಿನ 24/7 ನೀರು ಎತ್ತುವಳಿ ಜಾಕ್‌ವೆಲ್ ಸ್ಥಳಕ್ಕೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ನೀರಿನ ಹರಿಯು ಪರಿಶೀಲಿಸಿದರು. ಭೀಮಾನದಿಗೆ ಸದ್ಯ ಬರುತ್ತಿರುವ ನೀರು ಇಂಡಿ ನಗರಕ್ಕೆ ಕುಡಿಯುವ ನೀರು ಹಾಗೂ ಭೀಮಾನದಿಯ ದಂಡೆಯ ಮೇಲಿರುವ ಗ್ರಾಮಗಳಿಗೆ ಬೇಸಿಗೆ ಮುಗಿಯುವವರೆಗೆ ಎಷ್ಟು ದಿನಗಳವರೆಗೆ ನೀರು ಜನ, ಜಾನುವಾರುಗಳಿಗೆ ಅನುಕೂಲವಾಗುತ್ತದೆ ಎಂಬ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದುಕೊಂಡರು. ಈ ಸಂದರ್ಭದಲ್ಲಿ ಎಸಿ ಚಿದಾನಂದ ಗುರುಸ್ವಾಮಿ, ತಹಸೀಲ್ದಾರ್ ಬಿ.ಎಸ್.ಕಡಕಭಾವಿ, ತಾಪಂ ಇಒ ಮಹಾದೇವಪ್ಪ ಏವೂರ, ಕೆಬಿಜೆಎನ್‌ಎಲ್ ಅಧಿಕ್ಷಕ ಅಭಿಯಂತರ ಮನೋಜಕುಮಾರ ಗಡಬಳ್ಳಿ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.



ಸುದ್ದಿ ಸಿಂಚನ

ಕ್ವಿಂಟಾಲ್ ಸೂರ್ಯಕಾಂತಿಗೆ ₹7,721 ದರದಲ್ಲಿ ಖರೀದಿಗೆ ಸಚಿವ ಶಿವಾನಂದ ಆದೇಶ

ವಿಜಯಪುರ: ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ 2025-26ನೇ ಸಾಲಿನ ಹಿಂಗಾರು ಹಂಗಾಮಿನ ಸೂರ್ಯಕಾಂತಿಯನ್ನು ಪ್ರತಿ ಕ್ವಿಂಟಾಲ್‌ಗೆ ₹7,721 ದರದಲ್ಲಿ ಖರೀದಿಗೆ ಕಬ್ಬು ಅಭಿವೃದ್ಧಿ, ಸಕ್ಕರೆ, ಜವಳಿ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಆದೇಶಿಸಿದ್ದಾರೆ. ಕೇಂದ್ರ ಸರ್ಕಾರದ ಬೆಂಬಲ ಬೆಲೆ ಮಾರ್ಗಸೂಚಿಗಳ ಅನ್ವಯ ಬಾಗಲಕೋಟೆ, ಬೆಳಗಾವಿ,



ಬಳ್ಳಾರಿ, ವಿಜಯಪುರ, ಚಾಮರಾಜನಗರ, ಚಿತ್ರದುರ್ಗ, ಗದಗ, ಕಲಬುರಗಿ, ವಿಜಯನಗರ, ರಾಯಚೂರು ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಅವಶ್ಯಕತೆಗೆ ಅನುಗುಣವಾಗಿ ಖರೀದಿ ಕೇಂದ್ರಗಳನ್ನು ತೆರೆಯಲು ನಿರ್ದೇಶನ ನೀಡಿದ್ದಾರೆ. ನಾಫೆಡ್ ಮತ್ತು ಎನ್‌ಸಿಸಿಎಫ್ ಸಂಸ್ಥೆಗಳನ್ನು ಕೇಂದ್ರ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ಹಾಗೂ ಕರ್ನಾಟಕ ಸಹಕಾರಿ ಎಣ್ಣೆಬೀಜ ಬೆಳೆಗಾರರ ಮಹಾಮಂಡಳವನ್ನು ರಾಜ್ಯ ಸರ್ಕಾರದ ಖರೀದಿ ಸಂಸ್ಥೆಗಳನ್ನಾಗಿ ನೇಮಕ ಮಾಡಲಾಗಿದೆ. ನೋಂದಣಿ ಅವಧಿಯನ್ನು 50 ದಿನ ಹಾಗೂ ಖರೀದಿ ಅವಧಿಯನ್ನು 60 ದಿನ ನಿಗದಿಪಡಿಸಲಾಗಿದೆ. ನೋಂದಣಿ ಜೊತೆಗೆ ಖರೀದಿ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಗ್ರಾಮೀಣ ಭಾಗದ ರೈತರಿಗೆ ಅನುಕೂಲವಾಗುವಂತೆ ತಾಂತ್ರಿಕ ಮತ್ತು ವೈಜ್ಞಾನಿಕ ಸೌಲಭ್ಯದಿಂದ ಕೂಡಿರುವ ಗೋದಾಮುಗಳನ್ನು ಹೊಂದಿರುವ ಸಂಸ್ಥೆಗಳೊಂದಿಗೆ ಒಪ್ಪಂದ ಮಾಡಿಕೊಂಡು ಖರೀದಿ ಕೇಂದ್ರಗಳನ್ನು ತೆರೆಯಬೇಕು. ನೋಂದಣಿ ಮತ್ತು ಖರೀದಿಯಲ್ಲಿ ಯಾವುದೇ ಸಮಸ್ಯೆಗಳಾಗದಂತೆ ಸಿದ್ಧತೆ ಮಾಡಿಕೊಂಡು ಪ್ರಕ್ರಿಯೆ ಆರಂಭಿಸಬೇಕು ಎಂದು ಸೂಚಿಸಿದ್ದಾರೆ. ರೈತರ ಹೆಸರಿನಲ್ಲಿ ವರ್ತಕರು ಮತ್ತು ಖರೀದಿ ಸಂಸ್ಥೆಗಳು ಬೆಂಬಲ ಬೆಲೆ ಖರೀದಿ ಕೇಂದ್ರಗಳನ್ನು ದುರ್ಬಳಕೆ ಮಾಡಿಕೊಳ್ಳಲು ಅವಕಾಶ ನೀಡಬಾರದು. ಖರೀದಿ ಪ್ರಗತಿ ವಿವರವನ್ನು ಪ್ರತಿ ದಿನ ರಾಜ್ಯ ಸರ್ಕಾರ ಹಾಗೂ ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಗೆ ಒದಗಿಸಬೇಕು ಎಂದು ತಿಳಿಸಿದ್ದಾರೆ.

ಪವರ್‌ಮ್ಯಾನ್‌ಗಳಿಗೆ ಭದ್ರತೆ, ಸುರಕ್ಷತಾ ಕಿಟ್ ಒದಗಿಸಲು ಆಗ್ರಹಿಸಿ ಮನವಿ

ಬಸವನಬಾಗೇವಾಡಿ: ತಾಲೂಕಿನ ಮನಗೂಳಿ ಪಟ್ಟಣದ ಹೆಸ್ಕಾಂ ಉಪ-ಕೇಂದ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಸ್ಕಾಂ ಪವರಮ್ಯಾನ್‌ಗಳಿಗೆ ಸೂಕ್ತ ಭದ್ರತೆ ಮತ್ತು ಸುರಕ್ಷತಾ ಕಿಟ್ ಒದಗಿಸುವಂತೆ ಆಗ್ರಹಿಸಿ ನಮ್ಮ ಮನಗೂಳಿ ನಾಗರಿಕರ ಅಭಿವೃದ್ಧಿ ಸಂಘ ಹಾಗೂ ಹೆಸ್ಕಾಂ ಗ್ರಾಹಕರು ಮತ್ತು ಹಿತೈಷಿಗಳು ಹೆಸ್ಕಾಂ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಸಲ್ಲಿಸಿದರು. ಈ ವೇಳೆ ಮಾತನಾಡಿದ ಭಾಗ್ಯರಾಜ ಸೊನ್ನದ, ಮನವಿಯಲ್ಲಿ ಮನಗೂಳಿ ಉಪ-ಕೇಂದ್ರದ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವ ಹೆಸ್ಕಾಂ ಪವರಮ್ಯಾನ್ ಸಿಬ್ಬಂದಿಗೆ 24x7 ವಿದ್ಯುತ್ ಸೇವೆ ನೀಡಲು ತಮ್ಮ ಪ್ರಾಣವನ್ನೇ ಪಣಕ್ಕಿಡುತ್ತಿದ್ದಾರೆ. ಕಂಬ ಹತ್ತುವುದು, ಲೈನ್ ದುರಸ್ತಿ, ಟ್ರಾನ್ಸ್‌ಫಾರ್ಮರ್ ನಿರ್ವಹಣೆ ಇವೆಲ್ಲವೂ ಅತ್ಯಂತ ಅಪಾಯಕಾರಿ ಕೆಲಸಗಳು. ಇತ್ತೀಚೆಗೆ ಸುರಕ್ಷತಾ ಸಾಧನಗಳ ಕೊರತೆ ಮತ್ತು ನಿರ್ಲಕ್ಷ್ಯದಿಂದ 3 ಅಮೂಲ್ಯ ಜೀವಗಳು ಬಲಿಯಾಗಿರುವುದು ತೀವ್ರ ಕಳವಳಕಾರಿ. ಇಂತಹ ದುರಂತಗಳು ಮನಗೂಳಿಯಲ್ಲಿ ಮರುಕಳಿಸದಂತೆ ತಡೆಯಲು ತಾವು ಕೂಡಲೇ ಸೂಕ್ತ ಕ್ರಮಗಳನ್ನು ಜರುಗಿಸಬೇಕು ಎಂದು ಆಗ್ರಹಿಸಿದರು. ಎಲ್ಲ ಪವರಮೆನ್‌ಗಳಿಗೆ ಐಎಸ್‌ಐ ಮಾರ್ಕ್ ಇರುವ ಹೆಲ್ಮೆಟ್, ಫುಲ್ ಬಾಡಿ ಸೇಫ್ಟಿ ಬೆಲ್ಟ್, 11ಕ್ವಿ ಇನ್ಸುಲೇಟೆಡ್ ಹ್ಯಾಂಡ್ ಗ್ಲೌಸ್, ಸುರಕ್ಷತಾ ಶೂ, ಲೈನ್ ಟೆಸ್ಟರ್‌ಮತ್ತು ರೈನ್ ಕೋಟ್‌ಗಳನ್ನು ತಕ್ಷಣ ವಿತರಿಸಬೇಕು.ಯಾವುದೇ ಪವರಮ್ಯಾನ್ ಒಬ್ಬಂಟಿಯಾಗಿ ಲೈನ್ ಕೆಲಸ ಮಾಡುವುದನ್ನು ಸಂಪೂರ್ಣ ನಿಷೇಧಿಸಿ, ಕನಿಷ್ಠ 2 ಜನರ ತಂಡದಲ್ಲಿ ಮಾತ್ರ ಕೆಲಸ ಮಾಡುವಂತೆ ಖಚಿತಪಡಿಸಿಕೊಳ್ಳಬೇಕು. ಪ್ರತಿ 3 ತಿಂಗಳಿಗೊಮ್ಮೆ ಸುರಕ್ಷತಾ ನಿಯಮಗಳು ಮತ್ತು ಪ್ರಥಮ ಚಿಕಿತ್ಸೆಯ ಬಗ್ಗೆ ಕಡ್ಡಾಯ ತರಬೇತಿ ನೀಡಬೇಕು.ಪ್ರತಿ ಇಲಾಖಾ ವಾಹನದಲ್ಲಿ ಪ್ರಥಮ ಚಿಕಿತ್ಸಾ ಪೆಟ್ಟಿಗೆ ಮತ್ತು ತುರ್ತು ಸಂಪರ್ಕ ಸಂಖ್ಯೆಗಳ ಪಟ್ಟಿ ಇರಬೇಕು. ಒಬ್ಬ ಪವರಮೆನ್ ಅವರ ಕುಟುಂಬಕ್ಕೆ ಆಧಾರಸ್ತಂಭ. ಅವರ ಜೀವ ರಕ್ಷಣೆ ಮಾಡುವುದು ಇಲಾಖೆಯ ಮತ್ತು ನಮ್ಮೆಲ್ಲರ ನೈತಿಕ ಜವಾಬ್ದಾರಿ. ತಾವು ಈ ಮನವಿಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ, ಮನಗೂಳಿ ಶಾಖೆಯ ಎಲ್ಲ ಸಿಬ್ಬಂದಿಗೆ 15 ದಿನಗಳೊಳಗಾಗಿ ಸುರಕ್ಷತಾ ಕಿಟ್ ವಿತರಿಸಿ ಸೂಕ್ತ ಆದೇಶ ಹೊರಡಿಸಬೇಕೆಂದು ತಿಳಿಸಲಾಗಿದೆ.

ಗ್ಯಾರಂಟಿ ಬಂದ್ ಮಾಡಿ ಸಾಲಮನ್ನಾವಾಗಲಿ

ರಾಜ್ಯಮಟ್ಟದ ರೈತ ಜಾಗೃತಿ ಸಮಾವೇಶದಲ್ಲಿ ಶಶಿಕಾಂತ ಗುರೂಜಿ ಸಲಹೆ



• **ಕನ್ನಡಪ್ರಭ ವಾರ್ತೆ** ವಿಜಯಪುರ

ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳಿಂದ ಇಡೀ ರಾಜ್ಯ ಹಾಳಾಗುತ್ತಿದ್ದು, ಸರ್ಕಾರ ಕೂಡಲೇ ಗ್ಯಾರಂಟಿ ಯೋಜನೆಗಳನ್ನು ಬಂದ್ ಮಾಡಿ ಅದರ ಬದಲಿಗೆ ರೈತರ ಸಾಲಮನ್ನಾ ಕಾಳಜಿ ವಹಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಆಗ್ರಹಿಸಿದರು.

ನಗರದ ದರ್ಬಾರ ಹೈಸ್ಕೂಲ್ ಮೈದಾನದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಶುಕ್ರವಾರ ಹಮ್ಮಿಕೊಂಡಿದ್ದ ರಾಜ್ಯಮಟ್ಟದ 4ನೇ ಬೃಹತ್ ರೈತ ಜಾಗೃತಿ ಸಮಾವೇಶದಲ್ಲಿ ಮಾತನಾಡಿದ ಅವರು, ಆಲಮಟ್ಟಿ ಜಲಾಶಯದ ಎತ್ತರ ಹೆಚ್ಚಿಸುವ ನಿಟ್ಟಿನಲ್ಲಿ ಯಾವುದೇ ಪಕ್ಷದ ಜನಪತ್ರಿನಿಧಿಗೂ ಆಸಕ್ತಿ ಇಲ್ಲವಾಗಿದೆ. ಕೇಂದ್ರದ ಮೇಲೆ ರಾಜ್ಯ ಸರ್ಕಾರ ಮತ್ತು ರಾಜ್ಯ ಸರ್ಕಾರದವರ ಮೇಲೆ ಕೇಂದ್ರದವರು ಬೊಟ್ಟು ಮಾಡುತ್ತ ಸುಖಾಸುಮ್ಮನೆ ಕಾಲಹರಣ ಮಾಡುತ್ತ ರೈತರಿಗೆ ಮೋಸ ಮಾಡುತ್ತಿದ್ದಾರೆ. ಆಲಮಟ್ಟಿ ಆಣೆಕಟ್ಟು ಎತ್ತರ ಹೆಚ್ಚಿಸುವುದು ಜನಪತ್ರಿನಿಧಿಗಳ ಮಾತಿಗೆ ಸಿಮೀತವಾಗಿದೆ. ಆದರೆ, ಅವರ ವೇತನ ಮಾತ್ರ ಹೆಚ್ಚಾಗುತ್ತಲೇ ಇದೆ ಎಂದು ಕಿಡಿಕಾರಿದರು.

ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಮಾತನಾಡಿ, ಸರ್ಕಾರಗಳು ಕಳೆದ 79 ವರ್ಷಗಳಿಂದ ರೈತರ ಶ್ರಮಕ್ಕೆ ತಕ್ಕ ಬೆಲೆ ಕೊಟ್ಟಿಲ್ಲ. ಒಂದು ಕಡೆ ವಿದ್ಯುತ್, ಇನ್ನೊಂದು ಕಡೆ ನೀರು ನೀಡದೆ ಕೃಷಿಕರಿಗೆ ಮೋಸ ಮಾಡಿವೆ. ಪ್ರಧಾನಿ, ಸಿಎಂ ಎಲ್ಲರು ಸುಳ್ಳು ಹೇಳುತ್ತಿದ್ದು, ಜನಪ್ರತಿನಿಧಿಗಳು ರೈತರ ಸಾವಿನಲ್ಲಿ ರಾಜಕೀಯ ಮಾಡುತ್ತಿರುವುದು ಬೇಸರದ ಸಂಗತಿ. ಮೋದಿಯವರು ಪ್ರಧಾನಿಯಾಗಿ 11 ವರ್ಷಾವಾಗಿದೆ ಆದರೆ ಇದುವರೆಗೂ ಸ್ವಾಮಿನಾಥನ್ ವರದಿ ಜಾರಿ ಮಾಡಿಲ್ಲ. ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದರು. ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ಏನು ಮಾಡುತ್ತಿವೆ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರ ರೈತರಿಗೆ ತೂಕದಲ್ಲಿ ಮೋಸ ಆಗಬಾರದೆಂದು ತೂಕದ ಸೇತುವೆಗಳನ್ನು ಅಳವಡಿಸಲು ₹90 ಕೋಟಿ ತೆಗೆದಿರಿಸಿದೆಂದು ಹೇಳುತ್ತದೆ. ಆದರೆ, ಇದುವರೆಗೆ ರಾಜ್ಯದಲ್ಲಿ ಒಂದೇ ಒಂದು ತೂಕದ ಸೇತುವೆ ಅಳವಡಿಸಿಲ್ಲ ಎಂದು ದೂರಿದರು.

> ರಾಜ್ಯದಲ್ಲಿ ಜಾತಿ ಸಮೀಕ್ಷೆ ನಡೆದಿದೆ. ಅದನ್ನು ಮಾಡುವುದು ವ್ಯರ್ಥ. ರಾಜ್ಯ ಸರ್ಕಾರಕ್ಕೆ ನಿಜವಾಗಿಯೂ ರೈತರ ಮೇಲೆ ಪ್ರೀತಿ, ಕಾಳಜಿ ಇದ್ದರೇ ರೈತರ ಆತ್ಮಹತ್ಯೆ ಮತ್ತು ಹೆಚ್ಚುತ್ತಿರುವ ವೃದ್ಧಾಶ್ರಮಗಳ ಕುರಿತು ಸಮೀಕ್ಷೆ ಮಾಡಲಿ. ಅಲ್ಲದೇ, ಚುನಾವಣೆಯಲ್ಲಿ ಗೆದ್ದು ಶಾಸಕರಾಗುತ್ತಿದ್ದಂತೆ ಅವರ ಆಸ್ತಿ ಎಷ್ಟು ಪಟ್ಟು ಹೆಚ್ಚಾಗಿದೆ ಎಂದು ಸಮೀಕರಣ ಮಾಡುವ ಮೂಲಕ ಅಂತಹ ಹಣವನ್ನು ಸಿಎಂ ಖಾತೆಗೆ ತೆಗೆದುಕೊಂಡು ಅದನ್ನು ರೈತರಿಗೆ ಹಂಚಿಕೆ ಮಾಡಲಿ.
>
> • **ಶಶಿಕಾಂತ ಗುರೂಜಿ**
> ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಗೌರವಾಧ್ಯಕ್ಷರು.

ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಮಾತನಾಡಿ, ಆಲಮಟ್ಟಿ ಎತ್ತರ ಹೆಚ್ಚಿಸುವ ಜತೆಗೆ ಈ ಭಾಗದಲ್ಲಿ ಸಂಪೂರ್ಣ ನೀರಾವರಿ ಆಗ್ರಹಿಸಿ ಮುಂಬರುವ ದಿನಗಳಲ್ಲಿ ಕೃಷ್ಣ ಕಹಳೆ ಹೆಸರಿನಲ್ಲಿ ಹೋರಾಟ ಆರಂಭಿಸಲಾಗುವುದು ಎಂದು ಘೋಷಿಸಿದರು.

ಸಮಾವೇಶದ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಡಾ.ಆನಂದ.ಕೆ ಹಾಗೂ ಎಸ್ಪಿ ಲಕ್ಷ್ಮಣ ನಿಂಬರಗಿ ಅವರಿಗೆ ಸಂಘಟನೆ ಪ್ರಮುಖರು ತಮ್ಮ ಹಕೋತ್ತಾಯಗಳ ಮನವಿ ಪತ್ರವನ್ನು ಸಲ್ಲಿಸಿದರು. ಸಾನ್ನಿಧ್ಯ ವಹಿಸಿದ್ದ ಮುಗಳಖೋಡಮಠದಮುರಘರಾಜೇಂದ್ರ ಸ್ವಾಮೀಜಿ, ಹುಕ್ಕೇರಿಯ ಗುರುಶಾಂತೇಶ್ವರ ಸಂಸ್ಥಾನ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರರು, ಮಾತೋಶ್ರೀ ಸುವರ್ಣತಾಯಿ ಹೊಸಮಠ, ರಾಜ್ಯ ಪ್ರಧಾನ ಕಾರ್ಯದರ್ಶಿ ರಾಹುಲ ಕುಬಕಡ್ಡಿ, ರಾಜ್ಯ ಉಪಾಧ್ಯಕ್ಷ ಕಲ್ಲು ಸೊನ್ನದ, ಶಾಂತಗೌಡ ಪಾಟೀಲ ನಡಹಳ್ಳಿ ಮತ್ತಿತರರಿದ್ದರು.

ಯುವ ಜನ ಸೇನೆಯಿಂದ ಪೊಲೀಸ್ ಇಲಾಖೆಗೆ ಮನವಿ

ಸಿಸಿಟಿವಿ ಕ್ಯಾಮೆರಾ ಮರು ಅಳವಡಿಕೆಗೆ ಆಗ್ರಹ

• **ಕನ್ನಡಪ್ರಭ ವಾರ್ತೆ** ಮುದ್ದೇಬಿಹಾಳ

ಪಟ್ಟಣದ ಸಾರ್ವಜನಿಕರ ಸುರಕ್ಷತೆ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ನಾಲತವಾಡ ಪಟ್ಟಣದ ಪ್ರಮುಖ ಸ್ಥಳಗಳಲ್ಲಿ ಸ್ಥಗಿತಗೊಂಡಿರುವ ಸಿಸಿಟಿವಿ ಕ್ಯಾಮರಾಗಳನ್ನು ಕೂಡಲೇ ಮರು ಅಳವಡಿಸಬೇಕು ಎಂದು ಒತ್ತಾಯಿಸಿ ಯುವ ಜನ ಸೇನೆ (ರಿ) ಸಂಘಟನೆಯ ಪದಾಧಿಕಾರಿಗಳು ಮುದ್ದೇಬಿಹಾಳ ಪೊಲೀಸ್ ಉಪನಿರೀಕ್ಷಕ ಸಂಜಯ ತಿಪ್ಪಾರಡ್ಡಿ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಪಿಎಸೈ ಸಂಜಯ ತಿಪ್ಪಾರಡ್ಡಿ ಮನವಿ ಸ್ವೀಕರಿಸಿ ಈ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.



ನಾಲತವಾಡವು ವಾಣಿಜ್ಯ, ಶಿಕ್ಷಣ ಹಾಗೂ ವ್ಯಾಪಾರ ವಹಿವಾಟಿನ ಪ್ರಮುಖ ಕೇಂದ್ರವಾಗಿದ್ದು, ಇಲ್ಲಿಗೆ ನೆರೆಯ ಜಿಲ್ಲೆಗಳಾದ ಯಾದಗಿರಿ, ರಾಯಚೂರು ಸೇರಿದಂತೆ ವಿವಿಧ ಭಾಗಗಳಿಂದ ನಿತ್ಯ ಸಾವಿರಾರು ಜನರು ಆಗಮಿಸುತ್ತಾರೆ. ಈ ಹಿಂದೆ ಪೊಲೀಸ್ ಇಲಾಖೆ ಹಾಗೂ ಸಾರ್ವಜನಿಕರ ಸಹಕಾರದೊಂದಿಗೆ ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿತ್ತು. ಆದರೆ, ಕಳೆದ ವರ್ಷ ದುರಸ್ತಿಗಾಗಿ ತೆರವುಗೊಳಿಸಲಾದ ಈ ಕ್ಯಾಮೆರಾಗಳನ್ನು ಇದುವರೆಗೂ ಮರು ಅಳವಡಿಸಿಲ್ಲ ಎಂದು ಮನವಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಯುವ ಜನ ಸೇನೆಯ ರಾಜ್ಯ ಘಟಕದ ಅಧ್ಯಕ್ಷ ಶಿವಾನಂದ ವಾಲಿ ಮಾತನಾಡಿ, ವಿಶೇಷವಾಗಿ ಸೋಮವಾರ ನಡೆಯುವ ಸಂತೆ ದಿನದಂದು ಪಟ್ಟಣದಲ್ಲಿ ಜನಸಂದಣಿ ಹೆಚ್ಚಿರುತ್ತದೆ. ಸಿಸಿಟಿವಿ ವ್ಯವಸ್ಥೆ ಇಲ್ಲದಿರುವುದನ್ನು ದುರುಪಯೋಗಪಡಿಸಿಕೊಳ್ಳುತ್ತಿರುವ ಕಿಡಿಗೇಡಿಗಳಿಂದ ಕಳ್ಳತನ ಪ್ರಕರಣಗಳು ದಿನೇ ದಿನೇ ಹೆಚ್ಚುತ್ತಿವೆ. ಇದರಿಂದ ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಕೂಡಲೇ ಇದಕ್ಕೆ ಕಡಿವಾಣ ಹಾಕಬೇಕಿದೆ. ಸಾರ್ವಜನಿಕರ ಆಸ್ತಿಪಾಸ್ತಿ ರಕ್ಷಣೆ ಹಾಗೂ ಪಟ್ಟಣದ ಸುರಕ್ಷತೆಯ ಹಿತದೃಷ್ಟಿಯಿಂದ ಕೂಡಲೇ ವಿಳಂಬ ಮಾಡದೇ ಪ್ರಮುಖ ಸ್ಥಳಗಳಲ್ಲಿ ಅತ್ಯಾಧುನಿಕ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲು ಇಲಾಖೆ ಮುಂದಾಗಬೇಕು ಎಂದು ಒತ್ತಾಯಿಸಿದರು.


ಈ ಸಂದರ್ಭದಲ್ಲಿ ಯುವ ಜನ ಸೇನೆಯ ರಾಜ್ಯ ಉಪಾಧ್ಯಕ್ಷ ಬಸನಗೌಡ ಎಸ್.ಪಾಟೀಲ, ಪ್ರಧಾನ ಕಾರ್ಯದರ್ಶಿ ಮಾಳಿಂಗರಾಯ ವನಹಳ್ಳಿ, ಸಂಘಟನಾ ಕಾರ್ಯದರ್ಶಿ ಶಿವಾನಂದ ಪೂಜಾರಿ ಹಾಗೂ ಪ್ರಮುಖರಾದ ರವಿ ಕೆ.ಎಚ್, ಸಿದ್ದು ಹಾದಿಮನಿ, ಸೋಮನಗೌಡ ಬೆಳ್ಳಿ ಸೇರಿದಂತೆ ಸಂಘಟನೆಯ ಹಲವು ಪದಾಧಿಕಾರಿಗಳು ಉಪಸ್ಥಿತರಿದ್ದರು.

ಆರೋಗ್ಯ, ಶಿಕ್ಷಣದ ಸೇವೆಗೆ ನಮ್ಮನ್ನು ಬಳಸಿಕೊಳ್ಳಿ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಜಿಲ್ಲಾ ವೈದ್ಯಕೀಯ ಪ್ರಯೋಗಾಲಯ ತಂತ್ರಜ್ಞರ ಸಂಘವು ಅಧಿಕೃತ ನೋಂದಾಯಿತ ಸಂಘವಾಗಿದ್ದು, ಜಿಲ್ಲೆಯಲ್ಲಿ ನಡೆಯುವ ಆರೋಗ್ಯದ ಶಿಕ್ಷಣ ಕಾರ್ಯಕ್ರಮದಲ್ಲಿ ನಮ್ಮನ್ನು ಬಳಸಿಕೊಳ್ಳಬೇಕು ಎಂದು ಜಿಲ್ಲಾ ವೈದ್ಯಕೀಯ ಪ್ರಯೋಗಾಲಯ ತಂತ್ರಜ್ಞರ ಸಂಘದ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಸಂಘದ ಜಿಲ್ಲಾಧ್ಯಕ್ಷ ಶ್ರೀಕಾಂತ ಚಿಮ್ಮಲಗಿ ಮಾತನಾಡಿ, ಈ ಸಂಘವು ನೋಂದಾಯಿಸಿಕೊಂಡಾಗಿನಿಂದ ರಾಷ್ಟ್ರೀಯ ಮತ್ತು ರಾಜ್ಯದ ಸರಕಾರದ ಕಾರ್ಯಕ್ರಮದ ಜೊತೆಗಿದ್ದು, ಹಲವು ಸಾಮಾಜಿಕ ಸೇವೆಗಳನ್ನು ಮಾಡುತ್ತಲಿದೆ. ಹಾಗಾಗಿ ಜಿಲ್ಲಾ ಆಡಳಿತದಿಂದ ಆಯೋಜಿಸುವ ಕಾರ್ಯಕ್ರಮ ಮತ್ತು ಸಭೆಗಳಿಗೆ ನಮ್ಮನ್ನು ಗುರುತಿಸಿ ತಮ್ಮ ಎಲ್ಲಾ ಸಭೆಗೆ ಆಹ್ವಾನಿಸುವಂತೆ ವಿನಂತಿಸಿದರು.



ಈಗಾಗಲೇ 2011 ರಿಂದ ನಮ್ಮ ಸಂಘವು ಸಮುದಾಯದ ಜೊತೆಗೆ ವ್ಯಕ್ತಿಯ ಆರೋಗ್ಯ, ಪರಿಸರ, ಮಾಲಿನ್ಯ, ಶುಚಿತ್ವ ಆಹಾರ, ಕುಡಿಯುವ ನೀರು ಹೀಗೆ ಹಲವಾರು ವಿಷಯಗಳನ್ನು ಇಟ್ಟುಕೊಂಡು ಸಮುದಾಯದ ಮಾಹಿತಿ ಕಾಯಾಗಾರ ಮತ್ತು ಸಭೆ, ಸಮಾರಂಭಗಳನ್ನು ಮಾಡಿ ಜನರಲ್ಲಿ ಅರಿವು ಮೂಡಿಸುತ್ತಿದೆ. ಅಲ್ಲದೆ, ಶಾಲೆ-ಕಾಲೇಜು ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಹೆಣ್ಣು ಮಕ್ಕಳಿಗೆ ಆರೋಗ್ಯ ಹಾಗೂ ಶಿಕ್ಷಣದ ಮಾಹಿತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದರು. ಜಿಲ್ಲಾ ಕಾರ್ಯದರ್ಶಿ ಶ್ರೀಕಾಂತ ಬೋಸಲೆ, ಉಪಾಧ್ಯಕ್ಷ ಅರುಣ ಮನಗೂಳಿ, ಖಜಾಂಚಿ ರಂಗಾಚಾರಿ ಜಹಾಗಿರದಾರ, ಮಹಾಂತೇಶ ಹಳ್ಳೂರ ಇದ್ದರು.

ಯೋಧ ಸಾವು | ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ | ತ.ನಾಡು ಚುನಾವಣೆ ಮುಗಿಸಿಬಂದಿದ್ದ ಯೋಧ

ಹೃದಯಾಘಾತ: ಸಿಆರ್‌ಪಿಎಫ್ ಯೋಧ ಸಾವು

• **ಕನ್ನಡಪ್ರಭ ವಾರ್ತೆ** ಚಡಚಣ

ತಮಿಳುನಾಡಿನ ಚುನಾವಣೆ ಕಾರ್ಯ ಮುಗಿಸಿ ರಜೆಗಾಗಿ ಸ್ವಗ್ರಾಮಕ್ಕೆ ಆಗಮಿಸಿದ್ದ ಸಿಆರ್‌ಪಿಎಫ್ ಯೋಧ ತಮ್ಮ ತೋಟದಲ್ಲಿ ಕೆಲಸ ಮಾಡುವಾಗ ಹೃದಯಾಘಾತವಾಗಿದ್ದು, ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟ ಘಟನೆ ಇಂಡಿ ತಾಲೂಕಿನ ಹೊರ್ತಿ ಗ್ರಾಮದಲ್ಲಿ ಸೋಮವಾರ ನಡೆದಿದೆ.

ಹೊರ್ತಿ ಗ್ರಾಮದ ಸಿಆರ್‌ಪಿಎಫ್ ಯೋಧ ರೇವಣಸಿದ್ಧ ಅಶೋಕ ಪೂಜಾರಿ (30) ಮೃತ ಯೋಧ. ಮೃತ ಸಿಆರ್‌ಪಿಎಫ್ ಯೋಧನಿಗೆ ಪತ್ನಿ ಪವಿತ್ರಾ, 1 ವರ್ಷದ ಓರ್ವ ಪುತ್ರಿ ಆದಿತಿ ಸೇರಿದಂತೆ ಅಪಾರ ಬಂಧು-ಬಳಗವಿದೆ. ಈ ಕುರಿತು ಹೊರ್ತಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲಾಗಿದೆ.

ಆಂಧ್ರಪ್ರದೇಶದ ವಿಶಾಖ ಪಟ್ಟಣದಲ್ಲಿ ಸಿಆರ್ ಪಿಎಫ್‌ದಲ್ಲಿ ಸೇವೆ ಸಲ್ಲಿಸುತ್ತಿರುವ ಸಿಆರ್‌ಪಿಎಫ್ ಯೋಧ ರೇವಣಸಿದ್ಧ ಪೂಜಾರಿ ಅವರು ಏಪ್ರಿಲ್ ತಿಂಗಳ ತಮಿಳುನಾಡಿನ ಚುನಾವಣೆ ಕಾರ್ಯ ನಿಮಿತ್ತ ಚೆನ್ನೈನಲ್ಲಿ ಕಾರ್ಯನಿರ್ವಹಿಸಿದ ನಂತರ ಏ.25 ರಂದು ಸ್ವಗ್ರಾಹಮಕ್ಕೆ ಪುತ್ರಿಯ ಜವಳ ಕಾರ್ಯಕ್ರಮದ ಹಿನ್ನೆಲೆಯಲ್ಲಿ ರಜೆ ತೆಗೆದುಕೊಂಡು ಬಂದಿದ್ದರು. ಕೋಳೂರಗಿ ಗ್ರಾಮದ ರಸ್ತೆಗೆ ಹೊಂದಿಕೊಂಡಿರುವ ಸ್ವಂತ ತೋಟದ ವಸ್ತಿಯಲ್ಲಿ ಸೋಮವಾರ ರಾತ್ರಿ 9 ಗಂಟೆಸುಮಾರಿಗೆತೋಟದಲ್ಲಿ ಕೆಲಸದಲ್ಲಿದ್ದಾಗ ಹೃದಯಾಘಾತದಿಂದ ಸಾವನ್ನಪ್ಪಿದ್ದಾರೆ. ಅಂತ್ಯಕ್ರಿಯೆಯು ಹೊರ್ತಿ ಗ್ರಾಮದ ಕೊಳೂರಗಿ ಗ್ರಾಮದ ರಸ್ತೆಯಲ್ಲಿರುವ ತೋಟದ ವಸ್ತಿಯಲ್ಲಿ ಮಂಗಳವಾರ ಸಂಜೆ 6.30 ಗಂಟೆಗೆ ನಡೆದ ಅಂತ್ಯಕ್ರಿಯೆಯಲ್ಲಿ ಬೆಳಗಾವಿಯ ಅಸಿಸ್ಟೆಂಡ್ ಕಮಾಡೆಂಟ್ ಶ್ರವಣ ಮೀನಾ ಹಾಗೂ 10 ಜನ ಹೆಡ್ ಮತ್ತು ಸಿಟಿ ಕಾನಸ್ಟೆಬಲ್‌ರು ಆಗಮಿಸಿ ಸರ್ಕಾರಿ ಗೌರವ ವಂದನೆ ಸಲ್ಲಿಸಿದರು.

ಅಂತ್ಯಕ್ರಿಯೆ ಮುನ್ನ ಮೃತ ಸಿಆರ್‌ಪಿಎಫ್ ಯೋಧನ ಪತ್ನಿ ಪವಿತ್ರಾ ಪೂಜಾರಿ ಅವರಿಗೆ ಬೆಳಗಾವಿಯ ಎಸಿ ಕಮಾಡೆಂಟ್ ಶ್ರವಣ ಮೀನಾ ರಾಷ್ಟ್ರಧ್ವಜ ನೀಡಿ ಗೌರವಿಸಿ ಅಂತ್ಯಕ್ರಿಯೆ ನೆರವೇರಿಸಲಾಯಿತು.




> ಸೋಮವಾರ ರಾತ್ರಿ 9 ಗಂಟೆ ಸುಮಾರಿಗೆ ಹೊರ್ತಿ ಗ್ರಾಮದ ಕೋಳೂರಗಿ ರಸ್ತೆಯಲ್ಲಿರುವ ನಮ್ಮ ತೋಟದ ಹೊಲದಲ್ಲಿ ಕೆಲಸದಲ್ಲಿ ನೀರತನಾಗಿದ್ದ ವೇಳೆ ಹೃದಯಾಘಾತವಾಗಿದೆ. ನಂತರ ಕಾರು ತರಿಸಿ ಬಿಎಲ್‌ಡಿಇ ಆಸ್ಪತ್ರೆಗೆ ಕರೆದುಕೊಂಡು ಹೋದಾಗ ಹೃದಯ ಬಡಿತ ಬಂದಾಗಿ ಸಾವನ್ನಪ್ಪಿದ್ದಾನೆಂದು ವೈದ್ಯರು ತಿಳಿಸಿದ್ದಾರೆ. ನನ್ನ ಮಗ ಅಶೋಕ ಸಾವಿಗಿಡಾಗಿ 3 ದಿನವಾದರೂ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಇಂಡಿ ಎಸಿ, ತಹಸೀಲ್ದಾರ್ ಮತ್ತು ಜನಪ್ರತಿನಿಧಿಗಳು ಭೇಟಿ ನೀಡಿಲ್ಲ.
>
> • **ಅಶೋಕ ಸಿದ್ದರಾಯ ಪೂಜಾರಿ**
> ಸಿಆರ್‌ಪಿಎಫ್ ನಿವೃತ್ತ ಯೋಧ ಹಾಗೂ ಮೃತ ರೇವಣಸಿದ್ದರ ತಂದೆ.

ಬೀದಿ ನಾಯಿ ಉಪಟಳ ನಿಯಂತ್ರಿಸಿ: ಕೇಶವಪ್ರಸಾದ

• **ಕನ್ನಡಪ್ರಭ ವಾರ್ತೆ** ವಿಜಯಪುರ

ಬೀದಿ ನಾಯಿ ಉಪಟಳ ಸಂಪೂರ್ಣವಾಗಿ ನಿಯಂತ್ರಣ ಮಾಡುವ ನಿಟ್ಟಿನಲ್ಲಿ ಪಾಲಿಕೆ ಇಲಾಖಾಧಿಕಾರಿಗಳು ಗಂಭೀರ ಸ್ವರೂಪದ ಕ್ರಮಗಳನ್ನು ಕೈಗೊಳ್ಳಬೇಕು. ಈ ವಿಷಯದಲ್ಲಿ ವಿಳಂಬ ನೀತಿ ಅನುಸರಿಸದೇ ನಿಯಂತ್ರಣ ಕ್ರಮ ಕೈಗೊಳ್ಳಬೇಕು ಎಂದು ವಿಧಾನ ಪರಿಷತ್ ಸದಸ್ಯ ಕೇಶವಪ್ರಸಾದ ಒತ್ತಾಯಿಸಿದ್ದಾರೆ. ಈ ಕುರಿತು



ಪಕಟಣೆ ನೀಡಿರುವ ಅವರು, ಬೀದಿ ನಾಯಿಗಳ ಹಾವಳಿ ಭೀಕರ ಸ್ವರೂಪ ತಲುಪಿದೆ, ಚಿಕ್ಕ ಮಗುವನ್ನು ಬೀದಿ ನಾಯಿಗಳು ದಾಳಿ ನಡೆಸಿವೆ. ಆ ಮಗು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದೆ. ಮಗುವಿನ ಸಂಪೂರ್ಣ ವೈದ್ಯಕೀಯ ವೆಚ್ಚವನ್ನು ಸರ್ಕಾರವೇ ಭರಿಸಬೇಕು. ಮಗುವಿಗೆಇನ್ನೂ ಉನ್ನತಮಟ್ಟದ ಚಿಕಿತ್ಸೆ ಅಗತ್ಯವಿದ್ದರೇ ಅದನ್ನು ಕೂಡ ಸರ್ಕಾರ ಮುಂದಾಳತ್ವ ವಹಿಸಿ ಅದನ್ನು ದೊರಕಿಸಬೇಕು. ಬೀದಿ ನಾಯಿಗಳ ಉಪಟಳ ಜನರನ್ನು ಭಯಭೀತರನ್ನಾಗಿಸಿದೆ. ಚಿಕ್ಕ ಮಕ್ಕಳನ್ನು ಹೊರಗೆ ಬಿಡಲು ಹೆದರುವಂತಾಗಿದೆ. ದೊಡ್ಡವರು ಸಹ ಹೊರಗಡೆ ಸಂಚರಿಸಲು ಭಯ ಪಡುವ ಪರಿಸ್ಥಿತಿ ಇದೆ ಎಂದು ಅನೇಕರು ನನಗೆ ದೂರಿದ್ದಾರೆ. ಇದು ಆತಂಕಕಾರಿ ವಿಷಯ. ಈ ನಿಟ್ಟಿನಲ್ಲಿ ಪಾಲಿಕೆ ಹಾಗೂ ಸಂಬಂಧಿಸಿದ ಅಧಿಕಾರಿಗಳು ಸಮನ್ವಯತೆ ಸಾಧಿಸಿ ಬೀದಿ ನಾಯಿಗಳ ಉಪಟಳ ನಿಯಂತ್ರಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಕನ್ನಡಪ್ರಭ
ಶನಿವಾರ 9.05.2026

ಗರ್ಭಿಣಿಯರ ಆರೈಕೆಗೆ ಆದ್ಯತೆ ನೀಡಿ

ಜಿಲ್ಲಾಮಟ್ಟದ ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಸೂಚನೆ

• **ಕನ್ನಡಪ್ರಭ ವಾರ್ತೆ** ವಿಜಯಪುರ

ರಾಷ್ಟ್ರೀಯ ಆರೋಗ್ಯ ಅಭಿಯಾನ ಮತ್ತು ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಯೋಜನೆಯನ್ನು ಜಿಲ್ಲೆಯಲ್ಲಿ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಗರ್ಭಿಣಿಯರ ಆರೈಕೆ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ.ಕೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾಮಟ್ಟದ ಆರೋಗ್ಯ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗರ್ಭಿಣಿಯರ ಆರೋಗ್ಯ ತಪಾಸಣೆಯನ್ನು 12 ರಿಂದ 14 ಬಾರಿ ನಿಯಮಿತವಾಗಿ ಕೈಗೊಳ್ಳಬೇಕು. ಅನಿಮಿಯಾ, ಅಧಿಕ ರಕ್ತದೊತ್ತಡ, ಮಾನಸಿಕ ಆರೋಗ್ಯ ಮತ್ತು ವಿವಿಧ ಆರೋಗ್ಯ ಸಮಸ್ಯೆಗಳನ್ನು ಆರಂಭಿಕ ಹಂತದಲ್ಲಿ ಗುರುತಿಸಿ ಉಚಿತ ಆರೋಗ್ಯ ಚಿಕಿತ್ಸೆಯನ್ನು ಒದಗಿಸಬೇಕು ಎಂದರು.



ಜಿಲ್ಲೆಯಲ್ಲಿ ತಾಯಿ-ಮಕ್ಕಳ ಆರೋಗ್ಯ ರಕ್ಷಣೆಯಲ್ಲಿ ಆರ್.ಸಿ.ಎಚ್ ತಂತ್ರಾಂಶದಲ್ಲಿ ಗರ್ಭಿಣಿಯರಿಗೆ ಕಾಲ-ಕಾಲಕ್ಕೆ ಆರೋಗ್ಯದ ಕುರಿತು ತಿಳಿವಳಿಕೆ ನೀಡುವಂತೆ ಸೂಚನೆ ನೀಡಿದರು.

ಹೆರಿಗೆಯ ನಂತರ ಮಗುವಿಗೆ ಒಂದು ವರ್ಷ ತುಂಬುವ ವರೆಗೆ ಪಡೆದುಕೊಳ್ಳಬೇಕಾದ ಚಿಕಿತ್ಸೆ, ಔಷಧೋಪಚಾರ, ಲಸಿಕೆ ಸೌಲಭ್ಯಗಳ ಮಾಹಿತಿಯನ್ನು ಒದಗಿಸಬೇಕು. ಜೊತೆಗೆ ಆರೋಗ್ಯ ಸೇವಾ ಸೌಲಭ್ಯಗಳ ಮಾಹಿತಿ ನೀಡಬೇಕೆಂದು ಸೂಚಿಸಿದರು. ಗರ್ಭಿಣಿಯರ ಅಗತ್ಯ ಮಾಹಿತಿಯನ್ನು ನಿಯಮಿತವಾಗಿ ನೋಂದಣಿ ಮಾಡಬೇಕು. ಆಶಾ ಕಾರ್ಯಕರ್ತೆಯರು ಮನೆ ಮನೆಗೆ ಭೇಟಿ ನೀಡಿ, ಗಂಡಾಂತರ ಗರ್ಭಿಣಿಯರು ಕಂಡುಬಂದರೆ ಅಂತಹವರಿಗೆ ಸಕಾಲದಲ್ಲಿ ಆರೋಗ್ಯ ಸೇವೆ ನೀಡಬೇಕು. ಯಾವುದೇ ಕಾರಣಕ್ಕೆ ಗರ್ಭಿಣಿ ಹಾಗೂ ಮಕ್ಕಳನ್ನು ನಿರ್ಲಕ್ಷಿಸಬಾರದು ಎಂದರು.

ಕುಟುಂಬ ಕಲ್ಯಾಣ ಯೋಜನೆಯ ಬಗ್ಗೆ ಆಶಾ ಕಾರ್ಯಕರ್ತೆಯರು, ಅಂಗನವಾಡಿ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಹಾಗೂ ಸಮುದಾಯ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯವರಿಗೆ ತಾಲೂಕು ಮಟ್ಟದಲ್ಲಿ ತರಬೇತಿಯನ್ನು ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿಗಳು ಸೇರಿದಂತೆ ಎಲ್ಲ ವೈದ್ಯರಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬಿಸಿಲಿನ ತಾಪ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು ಗರ್ಭಿಣಿಯರು, ಅನಾರೋಗ್ಯ ಪೀಡಿತರು ಮತ್ತು ಬಹಳ ಸಮಯದಿಂದ ಔಷಧಿ ಸೇವಿಸುತ್ತಿರುವವರು ಬಿಸಿಲಿನಲ್ಲಿ ಹೆಚ್ಚು ಪರಿಶ್ರಮ ಮಾಡುವುದನ್ನು ತಪ್ಪಿಸಬೇಕು. ಬಿಸಿಗಾಳಿಯ ಸಂದರ್ಭದಲ್ಲಿ ದೇಹದ ನೀರಿನಾಂಶ ಕಡಿಮೆಯಾದಲ್ಲಿ ಸೂರ್ಯಘಾತ ಆಗುವ ಸಾಧ್ಯತೆಯು ಅಧಿಕವಾಗಿರುತ್ತದೆ. ಆದ್ದರಿಂದ ಮಧ್ಯಾಹ್ನದ ಸಮಯದಲ್ಲಿ ಶ್ರಮದಾಯಕ ಕೆಲಸಗಳನ್ನು ಮಾಡಬೇಡಿ. ಹೆಚ್ಚು ನೀರನ್ನು ಕುಡಿಯಿರಿ. ತಿಳಿ ಬಣ್ಣದ ಬಟ್ಟೆಯನ್ನು ಧರಿಸಿರಿ, ಹೊರಾಂಗಣದಲ್ಲಿ ಕೆಲಸ ಮಾಡುವಾಗ ಆಗಾಗ್ಗೆ ವಿಶ್ರಾಂತಿ ಪಡೆಯುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಶಿಶು ಮರಣ ಪ್ರಮಾಣ ಕಡಿಮೆ ಮಾಡುವುದಕ್ಕೆ ಗುಣಾತ್ಮಾಕ ಆರೋಗ್ಯ ಸೇವೆ, ಪ್ರಸವ ಪೂರ್ವ ಆರೈಕೆ, ಗಂಡಾಂತರ ಗರ್ಭಿಣಿ ಹೆರಿಗೆಗಳನ್ನು ಗುರುತಿಸಿ ಅವರಿಗೆ ಪ್ರಸೂತಿ ತಜ್ಞ ವೈದ್ಯರಿಂದ ಆರೈಕೆ ಹಾಗೂ ಆಪ್ತ ಸಮಾಲೋಚನೆ ಮೂಲಕ ಶೇ.100ರಷ್ಟು ಹೆರಿಗೆಗಳನ್ನು ಆರೋಗ್ಯ ಸಂಸ್ಥೆಗಳಲ್ಲಿ ಮಾಡಲಾಗುತ್ತಿದೆ. ಪ್ರತಿ ವರ್ಷ ಸಾವಿರಾರು ಜನರು ವಿಶೇಷವಾಗಿ ಮಕ್ಕಳು ನಾಯಿ ಕಡಿತಕ್ಕೆ ಒಳಗಾಗುತ್ತಾರೆ. ಸರಿಯಾದ ಅರಿವು ಮತ್ತು ಮುನ್ನಚ್ಚೆರಿಕೆಗಳೊಂದಿಗೆನಾಯಿಕಡಿತವನ್ನು ತಡೆಗಟ್ಟಬಹುದು. ಆದ್ದರಿಂದ ಎಲ್ಲ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರ್‍ಯಾಬೀಸ್ ವ್ಯಾಕ್ಸಿನೇಷನ್ (ಲಸಿಕೆ) ದಾಸ್ತಾನು ಇರುವಂತೆ ನೋಡಿಕೊಳ್ಳಬೇಕು ಮತ್ತು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಶಿವಾನಂದ ಮಾಸ್ತಿಹೊಳಿ, ಡಿಎಚ್‌ಇ, ಡಬ್ಲ್ಯೂಎಚ್.ಓ ಅಧಿಕಾರಿ ಡಾ.ಮುಕುಂದ ಗಲಗಲಿ, ಆರ್.ಸಿಎಚ್‌ಒ, ಬಿ.ಎಲ್.ಡಿ.ಈ ಸಂಸ್ಥೆಯ ಪ್ರಸೂತಿ ತಜ್ಞರು, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು, ಎಲ್ಲ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ಎಲ್ಲ ತಾಲೂಕು ಆರೋಗ್ಯಾಧಿಕಾರಿಗಳು, ಮುಖ್ಯ ಆಡಳಿತ ವೈದ್ಯಾಧಿಕಾರಿಗಳು ಭಾಗವಹಿಸಿದ್ದರು.



ಪಿಯು ಕಾಲೇಜು ಮಂಜೂರು

• **ಕನ್ನಡಪ್ರಭ ವಾರ್ತೆ** ಇಂಡಿ

ಮತಕ್ಷೇತ್ರದ ಹಡಲಸಂಗ, ಶಿರಶ್ಯಾಡ



ಹಾಗೂ ಬಸನಾಳ ಗ್ರಾಮಸ್ಥರ ಬಹುದಿನಗಳ ಬೇಡಿಕೆಯಾಗಿದ್ದ ಸರ್ಕಾರಿ ಪದವಿ ಪೂರ್ವ ಕಾಲೇಜನ್ನು ಒಂದೇ ದಿನದಲ್ಲಿ 3 ಗ್ರಾಮಗಳಿಗೆ ಏಕಕಾಲದಲ್ಲಿ ಪಿಯು ಕಾಲೇಜುಗಳು ಸಿಎಂ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಸರ್ಕಾರ ಮಂಜೂರು ಮಾಡಿದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು. ನಗರದ ಪ್ರವಾಸಿ ಮಂದಿರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಹಡಲಸಂಗ,ಶಿರಶ್ಯಾಡ ಗ್ರಾಮಕ್ಕೆ ಪ್ರಾಂಶುಪಾಲರು 1, ಕನ್ನಡ, ಇಂಗ್ಲಿಷ್, ಇತಿಹಾಸ, ಅರ್ಥಶಾಸ್ತ್ರ, ರಾಜ್ಯಶಾಸ್ತ್ರ, ಸಮಾಶಾಸ್ತ್ರ ಸೇರಿ ಉಪನ್ಯಾಸಕರು 6, ಪ್ರದಸ 1, ಗ್ರೂಪ್ ಡಿ 1 ಸೇರಿ ಒಟ್ಟು 9 ಹುದ್ದೆಗಳ ಸಮೇತ ಕಾಲೇಜು ಮಂಜೂರು ಆಗಿದೆ. ಬಸನಾಳ ಗ್ರಾಮದಲ್ಲಿನ ಪಪೂ ಕಾಲೇಜು ಸೇರಿ 14 ಹುದ್ದೆಗಳು ಮಂಜೂರು ಆಗಿವೆ. ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಕಾಲೇಜು ಆರಂಭಗೊಳ್ಳಲಿವೆ ಎಂದು ತಿಳಿಸಿವೆ. ಹಿಂದೆ ಬಂಥನಾಳ ಸಂಗನಬಸವ ಮಹಾಶಿವಯೋಗಿಗಳಿಂದ ಜಿಲ್ಲೆಯಲ್ಲಿ ಅಕ್ಷರ ಕ್ರಾಂತಿಯಿಂದ ಜಿಲ್ಲೆಯ ಜನರು ಅಕ್ಷರ ಜ್ಞಾನ ಕಲಿತುಕೊಂಡಿದ್ದಾರೆ. ಇಂದು ಹಿಂದುಳಿದ ತಾಲೂಕು ಶೈಕ್ಷಣಿಕ ಕ್ರಾಂತಿಯಲ್ಲಿ ಧಾಪುಗಾವಲು ಇಡುತ್ತಿದೆ. ಇದಕ್ಕೆಲ್ಲಾ ಸಹಾಯ ಮಾಡುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು,ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರವರ ಅವರನ್ನು ಅಭಿನಂದಿಸುವುದಾಗಿ ತಿಳಿಸಿದರು.

ಈರಯ್ಯ ಹಿರೇಮಠ ನಿಧನ

ಮುದ್ದೇಬಿಹಾಳ: ತಾಲೂಕಿನ ಕವಡಿಮಟ್ಟಿ ಗ್ರಾಮ ಪಂಚಾಯತಿ ವಿ.



ಆರ್‌ಡಬ್ಲ್ಯು ಹಾಗೂ ಪತ್ರಿಕಾ ವಿತರಕ ಹಿರೇಮುರಾಳ ಗ್ರಾಮದ ನಿವಾಸಿ ಈರಯ್ಯ ಶಿವಯ್ಯ ಹಿರೇಮಠ ಶುಕ್ರವಾರನಿಧನರಾದರು. ಅಂತ್ಯಕ್ರಿಯೆ ಶನಿವಾರ (ಮೇ 9) ಬೆಳಗ್ಗೆ 11ಕ್ಕೆ ಹಿರೇಮುರಾಳದಲ್ಲಿ ನಡೆಯಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ತಿಕೋಟಾದಲ್ಲಿಗ ಕ್ಯಾಲಿಫೋರ್ನಿಯಾದ ದ್ರಾಕ್ಷಿ


ವಿಜಯಪುರದಲ್ಲಿ ಔರಾ-36 ದ್ರಾಕ್ಷಿ ಫುಲ್ ಹವಾ | ಹೆಚ್ಚಿನ ರಾಸಾಯನಿಕ ಬಳಸದೆಯೇ ಅಧಿಕ ಇಳುವರಿ

• **ಶಶಿಕಾಂತ ಮೆಂಡೆಗಾರ**
ಕನ್ನಡಪ್ರಭ ವಾರ್ತೆ ವಿಜಯಪುರ

ಈ ಭೂಮಿಗೆ ನೀವು ಬೊಗಸೆ ನೀರು ಕೊಟ್ಟರೆ ಸಾಕು, ಇದು ಅಮೆರಿಕದ ಕ್ಯಾಲಿಫೋರ್ನಿಯಾವನ್ನೇ ಮೀರಿಸುತ್ತದೆ ಎಂದು ನಡೆದಾಡುವ ದೇವರು, ಶತಮಾನದ ಸಂತ ಸಿದ್ದೇಶ್ವರ ಸ್ವಾಮೀಜಿಗಳು ಹೇಳಿದ್ದ ಮಾತು ಇನ್ನೂ ಎಲ್ಲರ ಕಿವಿಯಲ್ಲಿ ಗುನುಗುತ್ತಿದೆ. ಶ್ರೀಗಳು ಹೇಳಿದ್ದ ಮಾತನ್ನು ಗಂಭೀರವಾಗಿ ಪರಿಗಣಿಸಿದ ಸಚಿವ ಎಂ.ಬಿ.ಪಾಟೀಲರು ಆ ಕಾಯಕಕ್ಕೆ ನೀರೆರೆದರು. ಈ ಹಿನ್ನೆಲೆ ಇದೀಗ ಕ್ಯಾಲಿಫೋರ್ನಿಯಾದಲ್ಲಿ ಬೆಳೆಯುವ ಬಹುಪ್ರಸಿದ್ಧ ಓರಾ-36 ತಳಿಯ ದ್ರಾಕ್ಷಿಯನ್ನೇ ವಿಜಯಪುರ ಜಿಲ್ಲೆಯಲ್ಲಿ ಬೆಳೆದು ರೈತರು ಸೈ ಎನಿಸಿಕೊಂಡಿದ್ದಾರೆ. ಕ್ಯಾಲಿಫೋರ್ನಿಯಾದ ಔರಾ-36 ತಳಿಯ ಕಂದು ಬಣ್ಣದ ದ್ರಾಕ್ಷಿ ರೈತರನ್ನು ಇಲ್ಲಿ ಹೆಚ್ಚು ಗಮನ ಸೆಳೆಯುತ್ತಿದೆ.

ಏನಿದು ಔರಾ-36 ದ್ರಾಕ್ಷಿ?: ಅಮೆರಿಕದ ಕ್ಯಾಲಿಫೋರ್ನಿಯಾದಲ್ಲಿ ಅತಿಹೆಚ್ಚು ಬೆಳೆಯಲಾಗುವ ಈ ಔರಾ-36 ದ್ರಾಕ್ಷಿ ನೋಡಲು ಕಂದು ಬಣ್ಣದ್ದಾಗಿದೆ. ಹೆಚ್ಚು ರಾಸಾಯನಿಕ ಬಳಸದೆಯೇ ಅಧಿಕ ಇಳುವರಿ ಕೊಡುತ್ತದೆ. ನೋಡಲು ಆಕರ್ಷಕವಾಗಿರುವ ಈ ದ್ರಾಕ್ಷಿ ತಿನ್ನಲು ಸಹ ಅಷ್ಟೆ ರುಚಿಕರ. ಇದು ಕ್ಯಾಲಿಫೋರ್ನಿಯಾದ ಗ್ರಾಫಾ ಗ್ಲೋಬಲ್ ಕಂಪನಿಯ ಪೆಟೆಂಟ್‌ನ ವೆರೈಟಿಯಾಗಿದ್ದು, ಇದನ್ನು ನಾಸಿಕನ ಸಹ್ಯಾದ್ರಿ ಫಾರ್ಮ್ಸ್ (ಎಫ್‌ಪಿಒ) ನವರು ವಿಸ್ತರಣೆ ಮಾಡಲು ಅನುಮತಿ ಪಡೆದಿದ್ದಾರೆ. ಅಲ್ಲಿಂದ ತಿಕೋಟಾಗೆ ಕಾಲಿಟ್ಟಿರುವ ಈ ದ್ರಾಕ್ಷಿ ಇದೀಗ ಜಿಲ್ಲೆಯಲ್ಲಿ ತನ್ನದೆಯಾದ ಬೇಡಿಕೆ ಹೊಂದಿದೆ.

ಇದು ರಾಸಾಯನಿಕವೋ ಅಥವಾ ಸಾವಯವವೋ?: ಮಹಾರಾಷ್ಟ್ರದ ನಾಸಿಕನ ಸಹ್ಯಾದ್ರಿ ಫಾರ್ಮ್ಸ್‌ನ ವಿಲಾಸರಾವ್ ಶಿಂಧೆ ಅವರ ಸಹಯೋಗದಲ್ಲಿ ಕ್ಯಾಲಿಫೋರ್ನಿಯಾದಲ್ಲಿ ಬೆಳೆಯುವ ಉತ್ಕೃಷ್ಟ ದರ್ಜೆಯ ಔರಾ-36 ತಳಿಯ ದ್ರಾಕ್ಷಿಯನ್ನು ತಿಕೋಟಾದ ಕೃಷ್ಣವೇಣಿ ಎಫ್.ಬಿ.ಒ (ಫಾರ್ಮರ್ಸ್ ಪ್ರೊಡ್ಯೂಜರ್ಸ್ ಆರ್ಗಾನೈಜೇಶನ್) ಇಲ್ಲಿ ಪರಿಚಯಿಸಿದೆ. ಈ ಮೊದಲು ಇಲ್ಲಿ ಬೆಳೆಯಲಾಗುತ್ತಿದ್ದ ಮಾಣಿಕ ಚಮನ್, ಥಾಮ್ಸನ್ ಸೀಡ್‌ಲೆಸ್, ಸೋನಾಕಾ ಈ ದ್ರಾಕ್ಷಿ ತಳಿಗಳಿಗೆ ಹೂ ಬಿಡುವ ಸಮಯದಲ್ಲಿ, ಕಾಯಿ ಗೊಂಚಲು ಹಿಡಿಯುವಾಗ, ದ್ರಾಕ್ಷಿ ವಿಸ್ತೀರ್ಣ ಹಾಗೂ ಬಣ್ಣ ಬರಲೆಂದು ಹಲವು ರಾಸಾಯನಿಕಗಳನ್ನು ಬಳಸಬೇಕಾದ ಅನಿವಾರ್ಯತೆ ಇತ್ತು. ಆದರೆ, ಈ ಔರಾ-36 ತಳಿಗೆ ಇದ್ಯಾವುದರ ಗೊಡವೆಯೇ ಇಲ್ಲ. ಹಿಗಾಗಿಯೇ ಇದು ಕೇವಲ ಶೇ.20ರಷ್ಟು ನಿರ್ವಹಣಾ ಖರ್ಚು, ಶೇ.20 ಔಷಧಯಲ್ಲೇ ದ್ರಾಕ್ಷಿ ಕೈಗೆ ಸಿಗುತ್ತದೆ.



ರಾಜ್ಯದಲ್ಲಿ ಮೊದಲ ಬಾರಿಗೆ ಪರಿಚಯ: ಕ್ಯಾಲಿಫೋರ್ನಿಯಾದಿಂದ ನಾಸಿಕ್‌ಗೆ ಬಂದ ಈ ದ್ರಾಕ್ಷಿಯನ್ನು ರಾಜ್ಯದಲ್ಲಿಯೇ ಮೊಟ್ಟ ಮೊದಲ ಬಾರಿಗೆ ತಿಕೋಟಾದ ರೈತರು ಪರಿಚಯಿಸಿದ್ದಾರೆ. ವಿಜಯಪುರ ಜಿಲ್ಲೆಯ ತಿಕೋಟಾದ ರೈತರಾದ ಸಂದೀಪ ಪಾಟೀಲ 1.5 ಎಕರೆ, ಯಮನಪ್ಪ ಕೊಣ್ಣೂರ 1.5 ಎಕರೆ, ರಾಜೇಂದ್ರ ಕುಸೂರ 2 ಎಕರೆ, ಅತಾಲಟ್ಟಿ ಗ್ರಾಮದಲ್ಲಿ ಡಾ.ಸುಭಾಷ ಮುದನೂರ 8 ಎಕರೆ, ತಾಜಪೂರದ ರಾಜು ಹಾಲಳ್ಳಿ 2 ಎಕರೆ, ನಿಡೋಣಿಯ ರಾವುತ ದರ್ಗಾ 9 ಎಕರೆಯಲ್ಲಿ ದ್ರಾಕ್ಷಿ ನಾಟಿ ಮಾಡಿದ್ದಾರೆ. 2025 ಜನವರಿಯಲ್ಲಿ ನಾಟಿ ಮಾಡಿದ್ದು, ಸೆಪ್ಟೆಂಬರ್ ತಿಂಗಳಿನಲ್ಲಿ ನಾಸಿಕನಿಂದ ಔರಾ-36 ತಳಿಯ ಕಡ್ಡಿಗಳನ್ನು ತಂದು ಕಸಿ ಮಾಡಲಾಗಿದೆ. ಈ ಫಸಲು 2027 ಫೆಬ್ರುವರಿಯಲ್ಲಿ ತಿಕೋಟಾದ ರೈತರು ಬೆಳೆದ ದ್ರಾಕ್ಷಿಯ ಮೊದಲ ಫಸಲು ಮಾರುಕಟ್ಟೆಗೆ ಬರಲಿದೆ.

ಇದು ರೈತರಿಗೆ ಹೇಗೆ ಲಾಭದಾಯಕ: ಸಾಮಾನ್ಯವಾಗಿ ಎಲ್ಲ ದ್ರಾಕ್ಷಿಗಳು ಬೆಳೆಯಲು ಪ್ರತಿ ಎಕರೆಗೆ ಸಾಲಿನಿಂದ ಸಾಲಿಗೆ 10 ಅಡಿ, ಗಿಡದಿಂದ ಗಿಡಕ್ಕೆ 5 ಅಡಿ ಅಂತರದಲ್ಲಿ ನಾಟಿ ಮಾಡುವಂತೆ ಇದನ್ನು ಮಾಡಬಹುದು. ದ್ರಾಕ್ಷಿ ಬೆಳೆಯಲು ಪ್ರತಿ ಎಕರೆಗೆ ₹6-7 ಲಕ್ಷ ಖರ್ಚಾಗುತ್ತದೆ. ಈ ದ್ರಾಕ್ಷಿಗೆ 7-8 ಲಕ್ಷ ವೆಚ್ಚವಾಗುತ್ತದೆ. ಒಂದು ಎಕರೆಗೆ 12 ರಿಂದ 15 ಟನ್ ಇಳುವರಿ ಬರಲಿದ್ದು, ಇದು ಕೂಡ ಅಷ್ಟೆ ಇಳುವರಿ ಸಿಗಲಿದೆ. ಆದರೆ ಬೇರೆ ದ್ರಾಕ್ಷಿಗಳು ಪ್ರತಿ ಕೆಜಿಗೆ ₹ 40ರಿಂದ 60 ಮಾರಾಟವಾಗುತ್ತವೆ. ಔರಾ-36 ದ್ರಾಕ್ಷಿಯೂ ಈಗಾಗಲೇ ಪ್ರತಿ ಕೆಜಿಗೆ ₹150ರಿಂದ 160 ರಂತೆ ಸಾಂಗ್ಲಿ, ತಾಸಗಾಂವನಲ್ಲಿ ಮಾರಾಟವಾಗಿದ್ದು, ಅಲ್ಲಿಂದ ಯೂರೋಪಿಯನ್ ರಾಷ್ಟ್ರಗಳಿಗೆ ರಫ್ತಾಗುತ್ತಿದೆ.

ನಾನು ಬಿಎಸ್‌ಸಿ ತೋಟಗಾರಿಕೆ ಪದವಿ ಮುಗಿಸಿದ ಬಳಿಕ ರೈತರಾದ ನಮ್ಮ ತಂದೆಯ ಜೊತೆಯಲ್ಲಿ ದ್ರಾಕ್ಷಿ ಬೆಳೆ ಬೆಳೆಯುತ್ತಿದ್ದೆ. ಆದರೆ ಸ್ಥಳೀಯ ದ್ರಾಕ್ಷಿ ಬೆಳೆಗಳಲ್ಲಿ ಪ್ರತಿಬಾರಿಯೂ ಒಂದಲ್ಲ ಒಂದು ಸಮಸ್ಯೆಗಳು ಎದುರಾಗುತ್ತಿದ್ದವು. ಇದನ್ನು ತಪ್ಪಿಸಬೇಕು ಎಂದುಕೊಂಡು ನಾನು ಹೊಸ ಹೊಸ ವಿಚಾರ ಶೋಧಿಸಿದೆ. ಆಗ ನಾನು ನಾಸಿಕನಲ್ಲಿರುವ ಸಹ್ಯಾದ್ರೀ ಫಾರಂಗೆ ಭೇಟಿ ನೀಡಿದಾಗ ಅಲ್ಲಿ 2019ರಿಂದಲೇ ಪ್ರಾಯೋಗಿಕವಾಗಿ ಔರಾ-36 ಬೆಳೆಯಲಾಗುತ್ತಿತ್ತು. ನಂತರದಲ್ಲಿ 2024ರಲ್ಲಿ ರಾಜ್ಯದಲ್ಲಿ ಬೆಳೆಯಲು ಅನುಮತಿ ಸಿಕ್ಕ ಬಳಿಕ ನಾವು ತಂದಿದ್ದೇವೆ.

• **ಸಂದೀಪ ಪಾಟೀಲ** ದ್ರಾಕ್ಷಿ ಬೆಳೆದ ರೈತ.

ಔರಾ-36 ತಳಿಯ ವಿಶೇಷತೆ

ಇದು ನೋಡಲು ಕಂದು ಬಣ್ಣದಿಂದ ಕೂಡಿದ್ದು ಆಕರ್ಷಕವಾಗಿದೆ. ಇದನ್ನು 48 ಡಿಗ್ರಿ ತಾಪಮಾನದಲ್ಲಿಯೂ ಬೆಳೆಯಬಹುದಾಗಿದೆ. ಯಾವುದೇ ತಾಪಮಾನದಲ್ಲೂ ಶೇ.100ರಷ್ಟು ಹೂ ಬಿಡಲಿದೆ. ಉತ್ತಮ ಸೈಜು ಸಿಗಲಿದ್ದು, ಉತ್ತಮ ಬಣ್ಣ ಹೊಂದಿದೆ. ಉತ್ಕೃಷ್ಟವಾಗಿದ್ದು, ಬಹಳ ರುಚಿಕರವಾಗಿದೆ. ಈ ಫಸಲು ಬಂದಾಗ ಮಳೆಯಾದರೆ ದ್ರಾಕ್ಷಿ ಹಣ್ಣು ಸೀಳುವುದಿಲ್ಲ, ಬೇರೆ ದ್ರಾಕ್ಷಿಗಳಿಗೆ ಕಾಯಿ ದಪ್ಪ ಮಾಡಲು ರಾಸಾಯನಿಕ ಬಳಸಲಾಗುತ್ತದೆ. ಇದಕ್ಕೆ ಯಾವುದೇ ರಾಸಾಯನಿಕದ ಅಗತ್ಯವಿಲ್ಲ.
